# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 | ಸಂಚಿಕೆ – 197 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 21–02–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 01 | Issue - 197 | Title- Code: KARKAN 28269 | Chitradurga | Date: 21-02-2024 Wednesday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಮೌಢ್ಯಾಚರಣೆ, ದುಶ್ಚಟಗಳಿಂದ ದೂರವಿರಿ: ಷಡಕ್ಷರಿ ಸ್ವಾಮಿಜಿ **2**

ಅಧಿಕಾರಿಗಳು ಗ್ರಾಮೀಣ ಭಾಗದಲ್ಲೇ ವಾಸವಿದ್ದು ಜನರಿಗೆ ನೆರವಾಗಿ: ಶಾಸಕ **3**

ತ್ರಿಪದಿಗಳಿಂದ ಮಾನವ ಕುಲಕ್ಕೆ ಸಂದೇಶ ನೀಡಿದ ಕವಿ ಸರ್ವಜ್ಞ: ಎಂ.ಕಾರ್ತೀಕ್ **4**



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫೆ.26 ಹಾಗೂ ಫೆ.27ರಂದು ಬೆಂಗಳೂರಿನಲ್ಲಿ ಬೃಹತ್ ಉದ್ಯೋಗ ಮೇಳ

# 500ಕ್ಕೂ ಅಧಿಕ ಖಾಸಗಿ ಕಂಪನಿಗಳು ಭಾಗಿ: ಒಂದು ಲಕ್ಷ ನಿರುದ್ಯೋಗಿಗಳಿಗೆ

» ಚಿತ್ರದುರ್ಗ

ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದಿಂದ ಫೆ.26 ಹಾಗೂ ಫೆ.27 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ರಾಜ್ಯಮಟ್ಟದ ಬೃಹತ್ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ. 500ಕ್ಕೂ ಅಧಿಕ ಖಾಸಗಿ ಕಂಪನಿಗಳು ಮೇಳದಲ್ಲಿ ಪಾಲ್ಗೊಳ್ಳಲಿವೆ. 1 ಲಕ್ಷಕ್ಕೂ ಅಧಿಕ ನಿರುದ್ಯೋಗಿಗಳಿಗೆ ಉದ್ಯೋಗಾವಕಾಶ ದೊರಕಲಿದೆ. ಜಿಲ್ಲೆಯ ಎಲ್ಲಾ ವಿದ್ಯಾವಂತ ನಿರುದ್ಯೋಗಿ ಯುವಕ, ಯುವತಿಯರು ತಪ್ಪದೇ https://skillconnect.kaushalkar.com ವೆಬ್‌ಸೈಟ್‌ನಲ್ಲಿ ನೋಂದಣಿ ಮಾಡಿಕೊಂಡು, ಉದ್ಯೋಗ ಮೇಳದಲ್ಲಿ ಭಾಗವಹಿಸಿ, ವಿಫುಲ ಉದ್ಯೋಗವಕಾಶಗಳನ್ನು ಪಡೆದುಕೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಕರೆ ನೀಡಿದ್ದಾರೆ.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜರುಗಿದ ಕೌಶಲ್ಯ ಮಿಷನ್ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗಾವಕಾಶ ನೀಡುವ ಸದುದ್ದೇಶದಿಂದ ರಾಜ್ಯ ಸರ್ಕಾರ ಬೃಹತ್ ಉದ್ಯೋಗ ಮೇಳವನ್ನು ಆಯೋಜಿಸುತ್ತಿದೆ. 18 ವರ್ಷ ತುಂಬಿದ, ಎಸ್.ಎಸ್.ಎಲ್.ಸಿ, ಪಿಯುಸಿ, ಪದವಿ, ಡಿಪ್ಲೊಮೋ, ಇಂಜಿನಿಯರಿಂಗ್ ಸೇರಿದಂತೆ ಎಲ್ಲಾ ವಿದ್ಯಾರ್ಹತೆಯುಳ್ಳ



ಉದ್ಯೋಗಾಕಾಂಕ್ಷಿಗಳು ಮೇಳದಲ್ಲಿ ಪಾಲ್ಗೊಳ್ಳಬಹುದು. ಸರ್ಕಾರ https://skillconnect.kaushalkar.com ವೆಬ್‌ಸೈಟ್ ಆರಂಭಿಸಿದೆ. ಉದ್ಯೋಗಾಕಾಂಕ್ಷಿಗಳು ಹಾಗೂ ಉದ್ಯೋಗದಾತರು ಇದರಲ್ಲಿ ನೊಂದಣಿ ಮಾಡಿ ಅರ್ಜಿ ಸಲ್ಲಿಸಬಹುದು. ಇದಕ್ಕಾಗಿಯೇ, 1800–599–9918 ಸಂಖ್ಯೆಯ ಸಹಾಯವಾಣಿ ಆರಂಭಿಸಲಾಗಿದೆ. ಬೆಂಗಳೂರು ಚಿತ್ರದುರ್ಗ ಜಿಲ್ಲೆಗೆ ಹತ್ತಿರವಿದ್ದು, ಉತ್ತಮ ಸಾರಿಗೆ ಸೌಲಭ್ಯವಿದೆ. ಯುವನಿಧಿಯಡಿ ಜಿಲ್ಲೆಯ ನೊಂದಣಿ ಮಾಡಿಕೊಂಡ ಅಭ್ಯರ್ಥಿಗಳಿಗೆ ಉದ್ಯೋಗ ಪಡೆಯಲು ಇದೊಂದು ಸದಾವಕಾಶವಾಗಿದೆ ಎಂದು ಅಪರ ಜಿಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದ್ದಾರೆ.

**ವ್ಯಾಪಕ ಪ್ರಚಾರ ನೀಡಲು ಸೂಚನೆ:** ಜಿಲ್ಲೆಯ ಪದವಿ ಪೂರ್ವ, ಪದವಿ, ಐಟಿಐ, ಜಿ.ಟಿ.ಟಿ.ಸಿ, ಪಾಲಿಟೆಕ್ನಿಕ್, ಇಂಜಿನಿಯರಿಂಗ್ ಸೇರಿದಂತೆ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರು ಈಗಾಗಲೇ ತೇರ್ಗಡೆ ಹೊಂದಿದ ಹಾಗೂ ಪ್ರಸ್ತುತ ವ್ಯಾಸಂಗ ಮಾಡುತ್ತಿರುವ ಅಭ್ಯರ್ಥಿಗಳ ವಿವರವನ್ನು ಸ್ಕಿಲ್ ಕನೆಕ್ಟ್ ಪೋರ್ಟಲ್‌ನಲ್ಲಿ ನೋಂದಾಯಿಸಬೇಕು. ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ತ್ಯಾಜ್ಯ ವಿಲೇವಾರಿ ವಾಹನಗಳಲ್ಲಿ ಉದ್ಯೋಗ ಮೇಳ ಕುರಿತಾದ ಜಿಂಗಲ್ಸ್ ಹಾಗೂ ಆಡಿಯೋ ರೆಕಾರ್ಡಿಂಗ್‌ಗಳನ್ನು ಹಾಕುವ ಮೂಲಕ ವ್ಯಾಪಕ ಪ್ರಚಾರ ನೀಡುವಂತೆ ಅಪರ ಜಿಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ ನೀಡಿದರು.

ಸಮಾಜ ಕಲ್ಯಾಣ, ಹಿಂದುಳಿದ ವರ್ಗ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳಿಗೆ ಉದ್ಯೋಗ ಮೇಳದ ಕುರಿತು ಮಾಹಿತಿ ನೀಡುವಂತೆ ಹಾಗೂ ಮೇಳದಲ್ಲಿ ಪಾಲ್ಗೊಳ್ಳಲು ಪ್ರೇರೇಪಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

**ಬೀದಿಬದಿ ವ್ಯಾಪಾರಿಗಳ ಕೌಟುಂಬಿಕ ಸಮೀಕ್ಷೆ:** ಪ್ರಧಾನ ಮಂತ್ರಿ ಬೀದಿ ಬದಿ ವ್ಯಾಪಾರಿಗಳ ಆತ್ಮನಿರ್ಭರ್ ಯೋಜನೆಯಡಿ ನೋಂದಣಿಯಾಗಿ ಸಾಲ ಪಡೆದ ಫಲಾನುಭವಿಗಳ ಕುಟುಂಬಗಳ ಸಾಮಾಜಿಕ ಹಾಗೂ ಆರ್ಥಿಕ ಸಮೀಕ್ಷೆಯನ್ನು ಶೀಘ್ರವೇ ಎಲ್ಲಾ ಸ್ಥಳೀಯ ಸಂಸ್ಥೆಗಳಲ್ಲಿ ಕೈಗೊಳ್ಳಬೇಕು. ಈ ಕುಟುಂಬಗಳಿಗೆ ಸ್ವನಿಧಿ ಸಮೃದ್ಧ್ ಯೋಜನೆಯಡಿ, ಪ್ರಧಾನ ಮಂತ್ರಿ ಸುರಕ್ಷಾ ಬೀಮಾ, ಜೀವನ್ ಜ್ಯೋತಿ ಬೀಮಾ, ಶ್ರಮಯೋಗಿ ಮನ್ ಧನ್ ಯೋಜನೆ, ಒನ್ ನೇಷನ್ ಒನ್ ರೇಷನ್ ಕಾರ್ಡ್, ಜನಧನ್, ಜನನಿ ಸುರಕ್ಷಾ, ಮಾತೃ ವಂದನಾ ಹಾಗೂ ಲೇಬರ್ ಕಾರ್ಡ್ ಹಣಕಾಸು ಸೌಲಭ್ಯಗಳನ್ನು ಸಮೀಕ್ಷೆ ಆಧಾರದಲ್ಲಿ ನೀಡಲಾಗುವುದು ಎಂದು ಅಪರ ಜಿಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು. ಸಭೆಯಲ್ಲಿ ಪಿ.ಎಂ ವಿಶ್ವಕರ್ಮ, ಡೇ ನಲ್ಮ್ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಲಾಯಿತು. ಕೃಷಿ ಜಂಟಿ ನಿರ್ದೇಶಕ ಮಂಜುನಾಥ್, ಮಹಿಳಾ ಮತ್ತು ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರಕುಮಾರ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ವೇಮಣ್ಣ, ಕೌಶಲ್ಯ ಮಿಷನ್ ಅಭಿಯಾನ ವ್ಯವಸ್ಥಾಪಕ ಅತೀಕ್ ರೆಹಮಾನ್, ಲೀಡ್ ಬ್ಯಾಂಕ್ ಮಾನೇಜರ್ ತಿಪ್ಪೇಸ್ವಾಮಿ ಸೇರಿದಂತೆ ವಿವಿಧ ಕಾಲೇಜುಗಳ ಪ್ರಾಂಶುಪಾಲರು, ಕೈಗಾರಿಕಾ ತರಬೇತಿ ಸಂಸ್ಥೆಯ ಮುಖ್ಯಸ್ಥರು, ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.


## ಫಾಸ್ಟ್ ನ್ಯೂಸ್

### ಫೆ.22ರಂದು ಸೂಕ್ಷ್ಮ, ತುಂತುರ ನೀರಾವರಿ ಘಟಕಗಳ ಉಪಯೋಗ ಕುರಿತು ತರಬೇತಿ

» ಚಿತ್ರದುರ್ಗ

ಬಬ್ಬೂರು ಫಾರಂ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಇದೇ ಫೆ.22ರಂದು ಬೆಳಿಗ್ಗೆ 10ಕ್ಕೆ ಹಿರಿಯೂರು ತಾಲ್ಲೂಕಿನ ಧರ್ಮಪುರ ಹೋಬಳಿ ಮತ್ತು ಜವನಗೊಂಡನಹಳ್ಳಿ ಹೋಬಳಿಯ ರೈತರಿಗೆ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಸೂಕ್ಷ್ಮ ಮತ್ತು ತುಂತುರ ನೀರಾವರಿ ಘಟಕಗಳ ಉಪಯೋಗ ಮತ್ತು ನಿರ್ವಹಣೆ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ತರಬೇತಿ ಕಾರ್ಯಕ್ರಮದಲ್ಲಿ ಬೆಂಗಳೂರಿನ ಜೈನ್ ಇರಿಗೇಷನ್‌ನ ದೇವರಾಜ ಅವರು ನೀರಿನ ಸಮರ್ಥ ಬಳಕೆ, ಹನಿ ನೀರಾವರಿ ಮತ್ತು ಸ್ಪ್ರಿಂಕ್ಲರ್ ಘಟಕಗಳ ಉಪಯೋಗ ಮತ್ತು ಅವುಗಳ ನಿರ್ವಹಣೆಯ ಕುರಿತು ವಿಷಯ ಮಂಡನೆ ಮತ್ತು ಪ್ರಾತ್ಯಕ್ಷಿಕೆ ನೀಡುವರು. ಹಿರಿಯೂರು ತಾಲ್ಲೂಕಿನ ಧರ್ಮಪುರ ಹೋಬಳಿ ಮತ್ತು ಜವನಗೊಂಡನಹಳ್ಳಿ ಹೋಬಳಿಯ ಆಸಕ್ತ 60 ಜನ ರೈತರು ತರಬೇತಿಯಲ್ಲಿ ಭಾಗವಹಿಸಬಹುದಾಗಿದೆ. ತರಬೇತಿ ನೋಂದಣಿಗಾಗಿ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ಆರ್.ರಜನೀಕಾಂತ–8277931058, ಕೃಷಿ ಅಧಿಕಾರಿ ಟಿ.ಪಿ.ರಂಜಿತಾ–8277930959, ಕೃಷಿ ಅಧಿಕಾರಿ ಸಿಕಂದರ್ ಬಾಷಾ–8277931058 ಮತ್ತು ಎಂ.ಜೆ.ಪವಿತ್ರಾ–9535412286 ಅವರ ದೂರವಾಣಿ ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿ ತರಬೇತಿಯ ಸದುಪಯೋಗ ಪಡೆದುಕೊಳ್ಳಲು ಕೋರಿದೆ. ಮೊದಲು ನೋಂದಾವಣಿ ಮಾಡಿಕೊಂಡ 60 ಜನ ರೈತರಿಗೆ ಆದ್ಯತೆ ಮೇರೆಗೆ ತರಬೇತಿಗೆ ಪರಿಗಣಿಸಲಾಗುವುದು ಎಂದು ತಿಳಿಸಿದೆ.

### ನಾಳೆ ಬರಗೂರರ ಕಾಗೆ ಕಾರುಣ್ಯದ ಕಣ್ಣು ಜನಾರ್ಪಣೆ ಸಮಾರಂಭ




» ಚಿತ್ರದುರ್ಗ

ಗೆಳೆಯರ ಬಳಗದ ವತಿಯಿಂದ ಬರಗೂರು ರಾಮಚಂದ್ರಪ್ಪನವರ ಆಯ್ದ ಅನುಭವಗಳ ಕಥನ "ಕಾಗೆ ಕಾರುಣ್ಯದ ಕಣ್ಣು" ಜನಾರ್ಪಣೆ ಸಮಾರಂಭ ಇದೇ ಫೆ.22ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರದ ತ.ರಾ.ಸು ರಂಗಮಂದಿರದಲ್ಲಿ ಏರ್ಪಡಿಸಲಾಗಿದೆ. ಸಾಹಿತಿ ಡಾ.ರಾಜಪ್ಪ ದಳವಾಯಿ ಕೃತಿಯ ಜನಾರ್ಪಣೆ ಮಾಡುವರು. ಲೇಖಕಿ ಡಾ.ತಾರಿಣಿ ಶುಭದಾಯಿನಿ ಕೃತಿ ಕುರಿತು ಮಾತನಾಡುವರು. ಅತಿಥಿಗಳಾಗಿ ಬಿ.ಎ.ಲಿಂಗಾರೆಡ್ಡಿ, ಕೆ.ಎಂ.ವೀರೇಶ್, ಮೆಹಬೂಬ್ ಪಾಷಾ, ಜಿ.ಎಸ್.ಮಂಜುನಾಥ್, ಪ್ರೊ.ಸಂದೀಪ್, ಪಿ.ರಘು, ಓ.ಪರಮೇಶ್ವರಪ್ಪ ಭಾಗವಹಿಸುವರು. ಕೃತಿಯ ಲೇಖಕ ಪ್ರೊ.ಬರಗೂರು ರಾಮಚಂದ್ರಪ್ಪ, ನಾಡೋಜ ಡಾ.ಬರಗೂರು ಪ್ರತಿಷ್ಠಾನದ ಪ್ರಧಾನ ಕಾರ್ಯದರ್ಶಿ ಡಾ.ಸುಂದರರಾಜ ಅರಸು ವಿಶೇಷ ಉಪಸ್ಥಿತಿವಹಿಸುವರು. ಕಾರ್ಯಕ್ರಮದ ಆಯೋಜಕರಾದ ಚಿಕ್ಕಪ್ಪನಹಳ್ಳಿ ಷಣ್ಮುಖ, ಡಾ.ಜೆ.ಕರಿಯಪ್ಪ ಮಾಳಿಗೆ, ಅಹೋಬಲಪತಿ, ಗೋವಿಂದಪ್ಪ ಗೌನಹಳ್ಳಿ, ಗೋಪಾಲಸ್ವಾಮಿ ನಾಯಕ, ವಿನಾಯಕ್ ತೊಡರನಾಳ್, ಸಿ.ರಾಜಶೇಖರ್ ಉಪಸ್ಥಿತರಿರುವರು ಎಂದು ಗೆಳೆಯರ ಬಳಗ ಪ್ರಕಟಣೆ ತಿಳಿಸಿದೆ

# ಧೈರ್ಯ, ಸಾಹಸಕ್ಕೆ ಹೆಸರಾದವರು ಶಿವಾಜಿ

### ಬ್ರಿಟಿಷರ ವಿರುದ್ಧ ಧ್ವನಿಎತ್ತಿದ ಮೊಟ್ಟಮೊದಲ ಮಹಾರಾಜ ಎಂಬ ಖ್ಯಾತಿ: ಟಿ.ರಘುಮೂರ್ತಿ

» ಚಳ್ಳಕೆರೆ

ಛತ್ರಪತಿಶಿವಾಜಿ ಮಹಾರಾಜರು ಧೈರ್ಯ, ಸಾಹಸಕ್ಕೆ ಹೆಸರಾದವರು. ಮಹರಾಷ್ಟ್ರದಲ್ಲಿ ಜನಿಸಿದ ಅವರು, ಬ್ರಿಟಿಷರ ಆಡಳಿತದ ವಿರುದ್ಧ ತಿರುಗಿಬಿದ್ದ ಮೊಟ್ಟಮೊದಲ ಮಹಾರಾಜರು. ಶೌರ್ಯಕ್ಕೆ ಮತ್ತೊಂದು ಹೆಸರೇ ಛತ್ರಪತಿಶಿವಾಜಿ. ಇಂತಹ ಮಹಾನ್ ವ್ಯಕ್ತಿಯ ಆದರ್ಶಗಳನ್ನು ಮೈಗೂಡಿಸಿಕೊಂಡು ನಡೆದರೆ ನಮ್ಮೆಲ್ಲರ ಬದುಕು ಸಾರ್ಥಕ ಎಂದು ಕ್ಷೇತ್ರದ ಶಾಸಕ, ಸಣ್ಣ ಕೈಗಾರಿಕೆ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.


ಪುಟ 2




### ಜೆಇಇ ಪರೀಕ್ಷೆಯಲ್ಲಿ ಶೇ.94 ಅಂಕ ಪಡೆದ ಜೆ.ರೋಹಿಣಿ : ಅಭಿನಂದನೆ

**ಚಳ್ಳಕೆರೆ:** ಶೈಕ್ಷಣಿಕ ಕ್ಷೇತ್ರದಲ್ಲೂ ಸಹ ನಿರೀಕ್ಷೆಗೂ ಮೀರಿ ಹೆಚ್ಚು ಪೈಪೋಟಿ ನಡೆಯುತ್ತಿದ್ದು, ಪ್ರತಿಯೊಂದು ಪರೀಕ್ಷೆಯಲ್ಲೂ ವಿದ್ಯಾರ್ಥಿನಿಯರು ಮೇಲುಗೈ ಸಾಧಿಸುವ ಮೂಲಕ ಶೈಕ್ಷಣಿಕಪ್ರಗತಿಗೆನಾಂದಿಯಾಡಿದ್ದಾರೆ.ವಿಶೇಷವಾಗಿ ಗ್ರಾಮೀಣ ಭಾಗದ ವಿದ್ಯಾರ್ಥಿನಿಯರೂ ಸಹ ತಮ್ಮದೇಯಾದ ಪರಿಶ್ರಮದಿಂದ ಉತ್ತಮ ಫಲಿತಾಂಶ ಪಡೆಯುತ್ತಿದ್ದು, ಇದು ಶೈಕ್ಷಣಿಕ ಬದಲಾವಣೆಗೆ ಇಟ್ಟದಿಟ್ಟ ಹೆಜ್ಜೆ ಎಂದು ಶಿಕ್ಷಕರಾದ ಕೆಂಚವೀರನಹಳ್ಳಿ ಎನ್.ಮಲ್ಲೇಶ್ ತಿಳಿಸಿದರು. ಅವರು, ತಾಲ್ಲೂಕಿನ ದುಗ್ಗಾವರ ಗ್ರಾಮದ ಮುಖ್ಯ ಶಿಕ್ಷಕ ಜಯಣ್ಣನವರ ಪುತ್ರಿ ಜೆ.ರೋಹಿಣಿ ಇತ್ತೀಚೆಗೆ ನಡೆದ ಜೆಇಇ ಪರೀಕ್ಷೆಯಲ್ಲಿ ಶೇ.94.60 ಅಂಕ ಗಳಿಸಿದ್ದ ಹಿನ್ನೆಲೆಯಲ್ಲಿ ವಿದ್ಯಾರ್ಥಿಯನ್ನು ಅಭಿನಂದಿಸಿ ಮಾತನಾಡಿದರು.




ಪುಟ 3


**ಪ್ರಮುಖ ಸುದ್ದಿ**

# ಅಧಿಕಾರಿಗಳು ಜಾಗರೂಕತೆಯಿಂದ ಕರ್ತವ್ಯ ನಿರ್ವಹಿಸಿ

» ಚಿತ್ರದುರ್ಗ

ಮುಂಬರುವ ಲೋಕಸಭೆ ಚುನಾವಣಾ ಕಾರ್ಯಗಳಿಗೆ ಈಗಾಗಲೆ ನಿಯೋಜನೆಗೊಂಡಿರುವ ವಿವಿಧ ತಂಡಗಳ ಅಧಿಕಾರಿ, ಸಿಬ್ಬಂದಿಗಳು ಅತ್ಯಂತ ಜಾಗರೂಕತೆಯಿಂದ, ನಿಸ್ಪಕ್ಷಪಾತವಾಗಿ ಕರ್ತವ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ವೆಂಕಟೇಶ್ ಟಿ. ಅವರು ಸೂಚನೆ ನೀಡಿದರು.

ಲೋಕಸಭೆ ಚುನಾವಣೆ ಸಂಬಂಧ ರಾಜ್ಯ ಚುನಾವಣಾ ಅಧಿಕಾರಿಗಳು ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ಸಭಾಂಗಣದಲ್ಲಿ ಏರ್ಪಡಿಸಿದ ವಿಡಿಯೋ ಸಂವಾದ ಸಭೆಯ ಸಂದರ್ಭದಲ್ಲಿ ಅವರು ಮಾತನಾಡಿದರು.

ಬರುವ ಲೋಕಸಭೆ ಚುನಾವಣೆ ಸಂಬಂಧ ಜಿಲ್ಲೆಯಲ್ಲಿ ಈಗಾಗಲೆ ಸಕಲ ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದೆ. ಚುನಾವಣೆಯ ಮಾದರಿ ನೀತಿ ಸಂಹಿತೆಯ ಪಾಲನೆ ಬಗ್ಗೆ ತೀವ್ರ ನಿಗಾ ವಹಿಸಲು ಈಗಾಗಲೆ ಸೆಕ್ಟರ್ ಅಧಿಕಾರಿಗಳ ನೇಮಕ ಸಹ ಮಾಡಲಾಗಿದೆ ಎಂದರು.



ಎಂಸಿಸಿ, ಎಂಸಿಎಂಸಿ, ವಿಡಿಯೋ ಸರ್ವೆಲೆನ್ಸ್, ಸ್ಟ್ಯಾಟಿಕ್ ಸರ್ವೆಲೆನ್ಸ್, ನೋಡಲ್ ಅಧಿಕಾರಿಗಳು ಸೇರಿದಂತೆ ವಿವಿಧ ತಂಡಗಳನ್ನು ರಚಿಸಲಾಗಿದೆ. ಅಲ್ಲದೆ ಆಯಾ ತಂಡಗಳಿಗೆ ಲೋಕಸಭಾ ಚುನಾವಣಾ ಕರ್ತವ್ಯ ಕುರಿತು ಕಾಲ ಕಾಲಕ್ಕೆ ತರಬೇತಿಗಳನ್ನು ಆಯೋಜಿಸಲಾಗುತ್ತಿದೆ. ಅಧಿಕಾರಿಗಳು ತಮಗೆ ವಹಿಸಿದ ಕರ್ತವ್ಯವನ್ನುನಿಷ್ಠೆಯಿಂದನಿರ್ವಹಿಸಬೇಕು. ಯಾವುದೇ ಲೋಪದೋಷಗಳಿಗೆ, ದೂರುಗಳಿಗೆ ಅವಕಾಶ ನೀಡಬಾರದು ಎಂದು ತಿಳಿಸಿದರು.

ಚುನಾವಣಾ ಮಾದರಿ ನೀತಿ ಸಂಹಿತೆ, ಚುನಾವಣಾ ಖರ್ಚು ವೆಚ್ಚಗಳ ನಿರ್ವಹಣೆ ವಿಷಯ ಸೇರಿದಂತೆ ಚುನಾವಣಾ ಕರ್ತವ್ಯಗಳು ಅತ್ಯಂತ ಸೂಕ್ಷ್ಮ ವಿಷಯವಾಗಿದ್ದು, ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆ ಕೈಗೊಳ್ಳಲು ಅಧಿಕಾರಿಗಳು ತಂಡದ ರೂಪದಲ್ಲಿ ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಎಸ್. ಜೆ. ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿನಿರ್ದೇಶಕ ಬಿ. ಆನಂದ್, ಅಬಕಾರಿ ಉಪ ಆಯುಕ್ತ ಮಾದೇಶ್, ಡಿಯುಡಿಸಿ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ಚುನಾವಣಾ ವಿಭಾಗದ ಮಲ್ಲಿಕಾರ್ಜುನ್ ಸೇರಿದಂತೆ ತಾಲ್ಲೂಕುಗಳ ತಹಸಿಲ್ದಾರರು ಸಭೆಯಲ್ಲಿ ಉಪಸ್ಥಿತರಿದ್ದರು.


## ಫಾಸ್ಟ್ ನ್ಯೂಸ್

### ಭೂಸೇನಾ ನೇಮಕಾತಿಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಭಾರತೀಯ ಭೂ ಸೇನೆಯಲ್ಲಿ ವಿವಿಧ ಹುದ್ದೆಗಳ ನೇಮಕಾತಿಗಾಗಿ ಕರ್ನಾಟಕದ ಹಲವು ಜಿಲ್ಲೆಗಳಿಂದ ಅರ್ಜಿ ಕರೆಯಲಾಗಿದ್ದು, ಅದರಲ್ಲಿ ಚಿತ್ರದುರ್ಗ ಜಿಲ್ಲೆಯು ಸಹ ಇರುತ್ತದೆ. ಆಸಕ್ತ ಅರ್ಹ ಅಭ್ಯರ್ಥಿಗಳು ಮಾರ್ಚ್ 22 ರೊಳಗೆ www.joinindianarmy.nic.in ಜಾಲತಾಣದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080–25596517 ಗೆ ಸಂಪರ್ಕಿಸಬಹುದಾಗಿದೆ ಎಂದು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಶಕ ಡಾ.ಸಿ.ಎ.ಹಿರೇಮಠ ತಿಳಿಸಿದ್ದಾರೆ.

### ಫೆ.24ರಂದು ರೇಣುಕಾಯಲ್ಲಮ್ಮ ದೇವಿ ಜಾತ್ರಾ ಮಹೋತ್ಸವ



» **ಚಿತ್ರದುರ್ಗ**

ನಗರದ ಹೊಳಲ್ಕೆರೆ ರಸ್ತೆಯ ಶಾರದಮ್ಮ ಆರ್.ಎಸ್.ರುದ್ರಪ್ಪ ಕಲ್ಯಾಣ ಮಂಟಪದ ಪಕ್ಕದಲ್ಲಿರುವ ಸವದತ್ತಿ ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನದಲ್ಲಿ ಇದೇ ಫೆಬ್ರವರಿ 24ರಂದು ಬಾರತ ಹುಣ್ಣಿಮೆ ಅಂಗವಾಗಿ 77ನೇ ವರ್ಷದ ಶ್ರೀ ರೇಣುಕಾಯಲ್ಲಮ್ಮದೇವಿ ಜಾತ್ರಾ ಮಹೋತ್ಸವ ಹಮ್ಮಿಕೊಳ್ಳಲಾಗಿದೆ. ಫೆಬ್ರವರಿ 24ರಂದು ಶನಿವಾರ ಶ್ರೀ ರೇಣುಕಾಯಲ್ಲಮ್ಮ ದೇವಿಗೆ (ಜಡೇಯಲ್ಲಮ್ಮ) ಪಂಚಾಮೃತ ಅಭಿಷೇಕ, ಸಹಸ್ರ ಬಿಲ್ವಾರ್ಚನೆ, ಪುಷ್ಪ ಅಲಂಕಾರದೊಂದಿಗೆ ವಿಶೇಷ ದರ್ಶನ ಇರಲಿದೆ. ಅಂದು ಶ್ರೀದೇವಿಗೆ ಮಡ್ಲಕ್ಕಿ ಮತ್ತು ಪಡ್ಡಲಿಗೆ ತುಂಬಿಸಿಕೊಳ್ಳಲು ಏರ್ಪಡಿಸಿದೆ. ಅಂದು ಬೆಳಿಗ್ಗೆ 7 ರಿಂದ ರಾತ್ರಿ 10 ರವರೆಗೆ ಪೂಜೆ ನಡೆಯಲಿದೆ. ಸಮಸ್ತ ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ತೀರ್ಥ, ಪ್ರಸಾದ ಸ್ವೀಕರಿಸಿ, ಶ್ರೀದೇವಿ ಕೃಪೆಗೆ ಪಾತ್ರರಾಗಬೇಕು ಎಂದು ಶ್ರೀ ರೇಣುಕಾಯಲ್ಲಮ್ಮ ದೇವಸ್ಥಾನದ ಮುಖ್ಯಾಧಿಕಾರಿ ಎಲ್.ತುಕಾರಾಮ ಚವ್ಹಾಣ್ ತಿಳಿಸಿದ್ದಾರೆ.

### ಧೈರ್ಯ, ಸಾಹಸಕ್ಕೆ ಹೆಸರಾದವರು ಶಿವಾಜಿ



» **ಮೊದಲ ಪುಟದಿಂದ**

ಅವರು, ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಸೋಮವಾರ ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಾಗೂ ಮರಾಠ ಸಮುದಾಯದ ಮುಖಂಡರು ಹಮ್ಮಿಕೊಂಡಿದ್ದ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆಪುಷ್ಪನಮನಸಲ್ಲಿಸುವಮೂಲಕಚಾಲನೆ ನೀಡಿ ಮಾತನಾಡಿದರು. ಅತಿಚಿಕ್ಕವಯಸ್ಸಿನಲ್ಲಿಯೇ ಪರಾಕ್ರಮದಿಂದ ಹೋರಾಟ ಮಾಡುವ ಪ್ರವೃತ್ತಿಯನ್ನು ಮೈಗೂಡಿಸಿಕೊಂಡಿದ್ದ ಶಿವಾಜಿಮಹಾರಾಜರು ಸಮಾಜದ ಐಕ್ಯತೆಗಾಗಿ ಹೋರಾಡಿದ ಶ್ರೇಷ್ಠರು ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ತಹಶೀಲ್ದಾರ್ ರೇಹಾನ್ ಪಾಷ, ಮರಾಠ ಸಮಾಜದ ಸಂಸ್ಥಾಪಕರು, ಎಲ್ಲಾ ಜಾತಿಗಳ ಮದ್ಯೆ ಸಾಮರಸ್ಯ ಮೂಡಿಸಿದವರು, ಧಾರ್ಮಿಕ ಜಾಗೃತಿಯ ಕಹಳೆ ಊದಿದ ಏಕೈಕ ವ್ಯಕ್ತಿ ಶಿವಾಜಿಮಹಾರಾಜರು ಎಂದರು. ಕಾರ್ಯಕ್ರಮ ಉದ್ದೇಶಿಸಿ ಮರಾಠ ಸಮುದಾಯದ ಕಾರ್ಯದರ್ಶಿ ಜಿ.ನಾಗರಾಜು, ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್‌ಮುಂತಾದವರುಮಾತನಾಡಿದರು. ಕಾರ್ಯಕ್ರಮದಲ್ಲಿ ಸಮುದಾಯದ ಅಧ್ಯಕ್ಷ ನಾರಾಯಣರಾವ್‌ಮೋಹಿತೆ, ಅಬ್ಬಾಸ್‌ಪವರ್, ಲಕ್ಷ್ಮಿ, ಕಿರಣ್, ಇಓ ಶಶಿಧರ, ಸಿಡಿಪಿಓ ಹರಿಪ್ರಸಾದ್, ಬಿಸಿಎಂ ಅಧಿಕಾರಿ ದಿವಾಕರ್, ಎಸ್ಟಿ ಇಲಾಖೆ ಸುಧಾ, ಅರಣ್ಯ ಇಲಾಖೆ ಬಹುಗುಣ, ಪೌರಾಯುಕ್ತ ಸಿ.ಚಂದ್ರಪ್ಪ, ಪಶುವೈದ್ಯ ಇಲಾಖೆ ಡಾ.ರೇವಣ್ಣ, ಪಿಎಸ್‌ಐ ಸತೀಶ್‌ನಾಯ್ಕ, ಕಂದಾಯಾಧಿಕಾರಿ ಲಿಂಗೇಗೌಡ, ಗ್ರಾಮ ಲೆಕ್ಕಿಗ ಪ್ರಕಾಶ್, ನಗರಸಭಾ ಸದಸ್ಯರಾದ ಕೆ.ವೀರಭದ್ರಪ್ಪ, ಎಂ.ಜೆ.ರಾಘವೇಂದ್ರ, ಶಶಿಧರ, ಪ್ರಕಾಶ್, ಕುಶಲಕರ್ಮಿ ಪರಿಷತ್ ಅಧ್ಯಕ್ಷ ಆರ್.ಪ್ರಸನ್ನಕುಮಾರ್, ಡಿ.ಶ್ರೀನಿವಾಸ್ ಮುಂತಾದವರು ಉಪಸ್ಥಿತರಿದ್ದರು.

---

#### ಕಾಸವರಹಟ್ಟಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಜೆ.ಕಾವ್ಯಾ ಸಲಹೆ

# ಸಕ್ರಿಯವಾಗಲಿ ಗ್ರಾಮ ಆರೋಗ್ಯ ಪೌಷ್ಠಿಕ ಸಮಿತಿ

» **ಚಿತ್ರದುರ್ಗ**

ಜನಾರೋಗ್ಯ ನಿರ್ವಹಣೆಯಲ್ಲಿ ಗ್ರಾಮ ಆರೋಗ್ಯ ನೈರ್ಮಲ್ಯ ಪೌಷ್ಠಿಕ ಸಮಿತಿ ಸಕ್ರಿಯವಾಗಿ ಭಾಗವಹಿಸಬೇಕು ಎಂದು ಕಾಸವರಹಟ್ಟಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಜೆ.ಕಾವ್ಯಾ ಹೇಳಿದರು.



ಚಿತ್ರದುರ್ಗ ತಾಲ್ಲೂಕಿನ ಕಾಸವರಹಟ್ಟಿ ಪ್ರಾಥಮಿಕ ಆರೋಗ್ಯ ಕೇಂದ್ರದ ಮದಕರಿಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸಮುದಾಯ ಭವನದಲ್ಲಿ ಮಂಗಳವಾರ ಗ್ರಾಮ ಆರೋಗ್ಯ ನೈರ್ಮಲ್ಯ ಪೌಷ್ಠಿಕ ಸಮಿತಿ ಸದಸ್ಯರಿಗೆ ವಿಶ್ವಾಸ್ ಆಂದೋಲನದ ತರಬೇತಿ ಉದ್ದೇಶಿಸಿ ಅವರು ಮಾತನಾಡಿದರು.

ಕಾಸವರಹಟ್ಟಿ ಪ್ರಾಥಮಿಕ ಆರೋಗ್ಯ ಕೇಂದ್ರದ ವ್ಯಾಪ್ತಿಯಲ್ಲಿ 8 ಗ್ರಾಮ ಆರೋಗ್ಯ ನೈರ್ಮಲ್ಯ ಪೌಷ್ಠಿಕ ಸಮಿತಿಗಳು ಕಾರ್ಯ ನಿರ್ವಹಿಸುತ್ತಿದ್ದು, ಎಲ್ಲಾ ಸದಸ್ಯರಿಗೆ ಸಮಿತಿ ಬಲಪಡಿಸಲು, ಕ್ರಿಯಾಶೀಲರಾಗಿ ಗ್ರಾಮಗಳಲ್ಲಿ ಕಾರ್ಯನಿರ್ವಹಿಸುವಂತೆ ಮಾಡುವುದು ತರಬೇತಿಯ ಮುಖ್ಯ ಉದ್ದೇಶವಾಗಿದೆ. ಸಾರ್ವಜನಿಕ ಆರೋಗ್ಯ ಸಮಸ್ಯೆಗಳನ್ನು ಸ್ಥಳೀಯವಾಗಿ ಚರ್ಚಿಸಿ ಬಗೆಹರಿಸಿಕೊಳ್ಳಲು ಪ್ರಯತ್ನ ಮಾಡಬೇಕು ಎಂದರು.ಜಿಲ್ಲಾಕಾರ್ಯಕ್ರಮಸಂಯೋಜಕ ಕರಕಪ್ಪ ಮೇಟಿ ಮಾತನಾಡಿ, ಸಮಿತಿಗಳ ರಚನೆ, ಸದಸ್ಯರ ಜವಾಬ್ದಾರಿಗಳು. ನಿರ್ವಹಿಸಬೇಕಾದ ದಾಖಲಾತಿಗಳು, ಮುಕ್ತನಿಧಿಯ ಬಳಕೆ ಬಗ್ಗೆ ತಿಳಿಸಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಗ್ರಾಮೀಣ ಭಾಗದಲ್ಲಿ ಸಾಮಾನ್ಯವಾಗಿ ಉಂಟಾಗುವ ಸಾರ್ವಜನಿಕ ಆರೋಗ್ಯ ಸಮಸ್ಯೆಗಳ ಬಗ್ಗೆ ತಿಳಿಸಿದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಮಾತನಾಡಿ, ವಿಶ್ವಾಸ್ ಆಂದೋಲನದ ಕ್ರಿಯಾ ಯೋಜನೆ ಪ್ರತಿ ತಿಂಗಳು ಒಂದೊಂದು ಸಾರ್ವಜನಿಕ ಆರೋಗ್ಯ ಸಮಸ್ಯೆಗಳನ್ನು ಆಂದೋಲನದ ಮುಖಾಂತರ ಜನ ಜಾಗೃತಿ ಮೂಡಿಸಬೇಕು. ಬಾಲ್ಯವಿವಾಹ ನಿಯಂತ್ರಣ, ತಾಯಿ ಮರಣ, ಮಕ್ಕಳ ಮರಣ, ಶೌಚಾಲಯ ಬಳಕೆ, ಕೈ ತೊಳೆಯುವ ವಿಧಾನ, ಜೀವನ ಶೈಲಿ , ಘನ ತ್ಯಾಜ್ಯ ವಿಲೇವಾರಿ, ರಾಷ್ಟ್ರೀಯ ಬಾಲಸ್ವಾಸ್ಥ್ಯ ಕಾರ್ಯಕ್ರಮ, ರಾಷ್ಟ್ರೀಯ ಕೀಶೋರಿ ಸ್ವಾಸ್ಥ್ಯ ಕಾರ್ಯಕ್ರಮಗಳ ಬಗ್ಗೆ ಅರಿವು ಮೂಡಿಸಬೇಕು ಎಂದರು.

ತರಬೇತಿ ಕಾರ್ಯಾಗಾರದಲ್ಲಿ ವಿ.ಹೆಚ್.ಎಸ್.ಎನ್.ಸಿ ಸದಸ್ಯರಾದ ಸಾವಿತ್ರಮ್ಮ, ಮಂಜುನಾಥ, ಯಶೋದಮ್ಮ, ಲಕ್ಷ್ಮಿ, ಗ್ರಾಮದ ಹಿರಿಯ ನಾಗರಿಕರಾದ ಮೂರ್ತಪ್ಪ, ಆಶಾ ಕಾರ್ಯಕರ್ತೆಯರು ಇದ್ದರು.

---

## ಸರ್ವಜ್ಞನ ತ್ರಿಪದಿಗಳಲ್ಲಿ ಅಡಗಿದೆ ಸರ್ವಕಾಲಿಕ ಸತ್ಯ

» **ದಾವಣಗೆರೆ**

ಹದಿನಾರನೇ ಶತಮಾನದಲ್ಲಿ ಹಿರೇಕೆರೂರು ತಾಲ್ಲೂಕು ಅಂಬಲೂರು ಗ್ರಾಮದಲ್ಲಿ ಹುಟ್ಟಿ ಬೆಳೆದಂತಹ ಸರ್ವಜ್ಞ ತನ್ನ ತ್ರಿಪದಿಗಳ ಮೂಲಕ ಸರ್ವಕಾಲಿಕ ಸತ್ಯ ಮತ್ತು ಜೀವನದ ಪಾಠವನ್ನು ಪ್ರತಿಯೊಬ್ಬರಿಗೂ ತಿಳಿಸಿ ಕೊಟ್ಟಿದ್ದಾರೆ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ. ತಿಳಿಸಿದರು.



ಅವರು ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ಜಿಲ್ಲಾ ಕಂಬಾರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲಾಡಳಿತ ಭವನದಲ್ಲಿ ನೆಡೆದ ಸರ್ವಜ್ಞ ಜಯಂತಿಯಲ್ಲಿ ಸಂತ ಸರ್ವಜ್ಞನ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೇರವೇರಿಸಿ ಮಾತನಾಡಿದರು.

ಸರ್ವಜ್ಞನು ರಚಿಸಿದ ತ್ರಿಪದಿಗಳಲ್ಲಿ ಅತ್ಯಂತ ಸರಳ ಕನ್ನಡ ಭಾಷೆ ಇದೆ, ವೈಚಾರಿಕತೆ ಮತ್ತು ಸತ್ಯಕ್ಕೆ ಬಹಳ ಹತ್ತಿರವಾದಂತಹ ಹಲವು ಒಗಟುಗಳು ಇದರಲ್ಲಿ ಸೇರಿವೆ. ಒಟ್ಟು ಒಂದು ಸಾವಿರಕ್ಕೂ ಹೆಚ್ಚು ತ್ರಿಪದಿಗಳು ಸರ್ವಜ್ಞನ ಹೆಸರಿನಲ್ಲಿ ದಾಖಲಾಗಿವೆ, ಈಗಾಗಲೇ ಸರ್ಕಾರ ಇವುಗಳ ಸಂಗ್ರಹಣೆ ಮಾಡಿ ಹೊರತಂದಿದೆ ಎಂದರು.ಇತಿಹಾಸ ತಜ್ಞರ ಪ್ರಕಾರ ಇವುಗಳಲ್ಲಿ ಕೆಲವು ತ್ರಿಪದಿಗಳು ನಂತರದ ಕಾಲದಲ್ಲಿ ಬೇರೆ ಬೇರೆ ಲೇಖಕರಿಂದ ಬರೆಯಲ್ಪಟ್ಟಿರಬಹುದು, ಸರ್ವಜ್ಞನ ತ್ರಿಪದಿಗಳು ಅವರ ಸರಳತೆ ಮತ್ತು ಪ್ರಾಸಬದ್ಧತೆಯಿಂದ ಜನಪ್ರಿಯವಾಗಿವೆ. ಈ ತ್ರಿಪದಿಗಳು ಮುಖ್ಯವಾಗಿ ನೈತಿಕ, ಸಾಮಾಜಿಕ ಮತ್ತು ಧಾರ್ಮಿಕ ವಿಷಯ ಕುರಿತ ತ್ರಿಪದಿಗಳಾಗಿವೆ ಎಂದರು.

ಸರ್ವಜ್ಞ ಆಧ್ಯಾತ್ಮಿಕ ಚಿಂತಕರು, ಸಾಮಾಜಿಕ ಪರಿವರ್ತಕರು, ಇವರು ಮಾಡಿದಂತಹ ತತ್ವ, ಬೋಧನೆಗಳು ಉತ್ತಮ ಸಮಾಜ ನಿರ್ಮಾಣ ಮಾಡಬೇಕೆಂಬ ಉದ್ದೇಶ ಹೊಂದಿವೆ ಎಂದರು.ನಿವೃತ್ತ ಮುಖ್ಯ ಶಿಕ್ಷಕ ಕೆ.ಸಿ. ಲೋಕೇಶ್ ಉಪನ್ಯಾಸ ನೀಡಿದರು. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ ಇಟ್ನಾಳ್, ಹೆಚ್ಚುವರಿ ರಕ್ಷಣಾಧಿಕಾರಿ ವಿಜಯಕುಮಾರ್ ಎಂ. ಸಂತೋಷ್, ಅಪಾರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರಿನ್ ಭಾನು ಎಸ್.ಬಳ್ಳಾರಿ, ಸಂತ ಸರ್ವಜ್ಞ ಸಂಘದ ಅಧ್ಯಕ್ಷರಾದ ಪುಷ್ಪರಾಜು, ಪ್ರಧಾನ ಕಾರ್ಯದರ್ಶಿ ಇ.ತಿಪ್ಪೇಸ್ವಾಮಿ, ಉಪಾಧ್ಯಕ್ಷ ಮೂಗಬಸಪ್ಪ, ಯುವ ಸೈನ್ಯ ಅಧ್ಯಕ್ಷರು ಶಿವಕುಮಾರ ಎನ್, ಹರಿಹರ ತಾಲ್ಲೂಕು ಅಧ್ಯಕ್ಷರಾದ ಚಂದ್ರಶೇಖರ್ ಕಂಬಾರ, ಉಪಾಧ್ಯಕ್ಷರು ಈರಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ, ನಿವೃತ್ತ ಮುಖ್ಯ ಶಿಕ್ಷಕ ಬಸವರಾಜಪ್ಪ ಬಾತಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

---

## ವಿದ್ಯಾರ್ಥಿ ನಿಲಯ ಪ್ರವೇಶಾತಿಗೆ ಒತ್ತಾಯ




» **ಚಿತ್ರದುರ್ಗ**

2023–24ನೇ ಸಾಲಿನಲ್ಲಿ ವೃತ್ತಿಪರ ಕೋರ್ಸ್‌ಗಳಿಗೆ ಮ್ಯಾನೇಜ್‌ಮೆಂಟ್ ಕೋಟಾದಡಿಯಲ್ಲಿ ಪ್ರವೇಶಾತಿ ಪಡೆದಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶಾತಿ ಕಲ್ಪಿಸುವಂತೆ ಆಗ್ರಹಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಒತ್ತಾಯಿಸಿದೆ.

ನಗರದ ಸೋಮವಾರ ಪ್ರತಿಭಟನೆ ನಡೆಸಿದ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್, ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳಲ್ಲಿ ಈಗಾಗಲೇ 2023–24ನೇ ಸಾಲಿನಲ್ಲಿ ವೃತ್ತಿಪರ ಕೋರ್ಸ್‌ಗಳಿಗೆ ಮ್ಯಾನೇಜ್‌ಮೆಂಟ್ ಕೋಟಾದಡಿಯಲ್ಲಿ ಪ್ರವೇಶಾತಿ ಕೊಡದೆ ಇರುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ವಿದ್ಯಾಭ್ಯಾಸಕ್ಕೆ ತೊಂದರೆಯಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈಗಾಗಲೇ ಸಮಾಜ ಕಲ್ಯಾಣ ಇಲಾಖೆಯ ಆಯುಕ್ತರು ಹೊರಡಿಸಿರುವಂತಹ ಮ್ಯಾನೇಜ್‌ಮೆಂಟ್ ಕೋಟಾದಡಿಯಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ನೀಡುವುದಿಲ್ಲವೆಂದು ಆದೇಶವನ್ನು ಹಿಂಪಡೆದು, ಮ್ಯಾನೇಜ್‌ಮೆಂಟ್ ಕೋಟಾದಡಿಯಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಾತಿ ನೀಡಿ, ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಅನುಕೂಲ ಮಾಡಿಕೊಡಬೇಕೆಂದು ಒತ್ತಾಯಿಸಿದರು. ರಾಜ್ಯ ಕಾರ್ಯಕಾರಣಿ ಸದಸ್ಯರು, ಕನಕರಾಜ್.ಆರ್ ಕೋಡಿಹಳ್ಳಿ, ನಗರ ಕಾರ್ಯದರ್ಶಿ ಗೋಪಿ, ಕಾರ್ಯಕರ್ತರಾದ ಯುವರಾಜ್ ಹೆಗಡೆ, ದಾನೇಶ್.ಬಿ, ಅಜಯ್, ಹನುಮಂತ, ಚಿದಾನಂದ, ಅಜಯ್‌ಕುಮಾರ್, ಮಣಿಕಂಠ, ರಮೇಶ್ ಇನ್ನು ಉಪಸ್ಥಿತರಿದ್ದರು.

---

## ಚಳ್ಳಕೆರೆ ಠಾಣಾ ಇನ್ಸ್‌ಪೆಕ್ಟರ್‌ರಾಗಿ ಕೆ.ಕುಮಾರ್, ತಳಕು ವೃತ್ತ ನಿರೀಕ್ಷಕರಾಗಿ ರಾಜಶೇಖರಯ್ಯ ಅಧಿಕಾರ ಸ್ವೀಕಾರ

» **ಚಳ್ಳಕೆರೆ**

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆಯೂ ಸೇರಿದಂತೆ ಬೇರೆ ಎಲ್ಲಾ ಇಲಾಖೆಗಳಲ್ಲೂ ವರ್ಗಾವಣೆ ಪರ್ವ ಆರಂಭವಾಗಿದ್ದು, ತಾಲ್ಲೂಕಿನ ತಳಕು ಠಾಣಾ ವೃತ್ತ ನಿರೀಕ್ಷಕ ಕೆ.ಸಮೀವುಲ್ಲಾ ವರ್ಗಾವಣೆ ನಂತರ ರಾಜಶೇಖರಯ್ಯ ಎಂಬುವವರು ತಳಕು ವೃತ್ತ ನಿರೀಕ್ಷರಾಗಿ ಕರ್ತವ್ಯಕ್ಕೆ ಹಾಜರಾಗಿದ್ದಾರೆ.



ಚಳ್ಳಕೆರೆ ಠಾಣಾ ಇನ್ಸ್‌ಪೆಕ್ಟರ್‌ರಾಗಿ ಕಾರ್ಯನಿರ್ವಹಿಸುತ್ತಿದ್ದ ರಾಜಫಕ್ರುದ್ದೀನ್ ದೇಸಾಯಿ ವರ್ಗಾವಣೆಗೊಂಡು ಅವರ ಜಾಗಕ್ಕೆ ಉತ್ತರ ಕರ್ನಾಟಕದ ಸಿದ್ದಾಪುರ ಠಾಣೆಯ ಕೆ.ಕುಮಾರ್ ಆಗಮಿಸಿ ಕರ್ತವ್ಯಕ್ಕೆ ಹಾಜರಾಗಿದ್ದಾರೆ. ನಗರದ ಸಮುದಾಯದ ಹಲವಾರು ಮುಖಂಡರು ಕೆ.ಕುಮಾರ್‌ರವರನ್ನು ಠಾಣೆಯಲ್ಲಿ ಭೇಟಿ ಮಾಡಿ ಅಭಿನಂದಿಸಿದರು.

---

## ಪಿಟ್ಸ್ ಕಾಯಿಲೆಯಿಂದ ನರಳುತ್ತಿದ್ದ ಯುವಕ ನೇಣಿಗೆ ಶರಣು

» **ಚಳ್ಳಕೆರೆ**

ಕಳೆದ ಹಲವಾರು ವರ್ಷಗಳಿಂದ ಪಿಟ್ಸ್ ಕಾಯಿಲೆಯಿಂದ ನರಳುತ್ತಿದ್ದ ಯುವಕನೊಬ್ಬ ಜೀವನದಲ್ಲಿ ಬೇಸತ್ತು ನೇಣುಹಾಕಿಕೊಂಡು ಮೃತಪಟ್ಟ ಘಟನೆ ತಳಕುಠಾಣಾ ವ್ಯಾಪ್ತಿಯ ಬೇಡರೆಡ್ಡಿಹಳ್ಳಿ ಗ್ರಾಮದಲ್ಲಿ ನಡೆದಿದೆ. ಗ್ರಾಮದ ಚಂದ್ರಣ್ಣ ಎಂಬುವವ ಪುತ್ರ ಮಹಲಿಂಗ(23) ಸುಮಾರು ಐದು ವರ್ಷಗಳಿಂದ ಪಿಟ್ಸ್ ಕಾಯಿಲೆಯಿಂದ ನರಳುತ್ತಿದ್ದು, ಚಳ್ಳಕೆರೆ ಸೇರಿದಂತೆ ಎಲ್ಲೆಡೆ ಆಸ್ಪತ್ರೆಗೆ ತೋರಿಸಿದರೂ ವಾಸಿಯಾಗದ ಹಿನ್ನೆಲೆಯಲ್ಲಿ ಮನನೊಂದ ಆತ ಮಂಗಳವಾರ ಬೆಳಗ್ಗೆ ಗ್ರಾಮದ ಜಗರೆಡ್ಡಿ ಎಂಬುವವರ ಜಮೀನಿನ ಬೇವಿನ ಮರಕ್ಕೆ ಸೀರೆಯಿಂದ ನೇಣುಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ತಳಕು ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.


---

**ಪ್ರಮುಖ ಸುದ್ದಿ**

# ಮೌಢ್ಯಾಚರಣೆ, ದುಶ್ಚಟಗಳಿಂದ ದೂರವಿರಿ: ಷಡಕ್ಷರಿ ಸ್ವಾಮಿಜಿ

» **ಹೊಸದುರ್ಗ**

ದೇವರು, ಭಕ್ತಿ, ಧಾರ್ಮಿಕ ಕಾರ್ಯಗಳು ಮೌಢ್ಯಾಚರಣೆ ಕೇಂದ್ರಗಳಾಗದೇ, ಪರಸ್ಪರ ಸಹಬಾಳ್ವೆ, ಸಂಘಟನೆ ಕೇಂದ್ರಗಳಾಗಬೇಕು. ಸಮಾಜದ ಪ್ರತಿಯೊಬ್ಬ ವ್ಯಕ್ತಿಯೂ ಮೌಢ್ಯಚರಣೆ ಹಾಗೂ ದುಶ್ಚಟಗಳಿಂದ ದೂರವಿರಿ ಎಂದು ಹಿರಿಯೂರಿನ ಕೋಡಿಹಳ್ಳಿ ಆದಿಜಾಂವ ಮಠದ ಷಡಕ್ಷರಮುನಿ ಸ್ವಾಮೀಜಿ ಕಿವಿಮಾತು ಹೇಳಿದರು.ತಾಲ್ಲೂಕಿನ ಪೀಲಾಪುರ ಗ್ರಾಮದ ಡಾ.ಬಿ.ಆರ್.ಅಂಬೇಡ್ಕರ್ ಕಾಲೋನಿಯಲ್ಲಿ ಭಾನುವಾರ ಆಯೋಜಿಸಿದ್ದ 'ದುಗಾ9ಂಭಿಕ ದೇವಿಯ ನೂತನ ದೇವಸ್ಥಾನದ ಪ್ರರಂಭೋತ್ಸವ'ದ ಧಾರ್ಮಿಕ ಕಾರ್ಯಕ್ರಮ ಸಾನ್ನಿಧ್ಯ ವಹಿಸಿ ಮಾತನಾಡಿದರು. ಅತ್ಯಂತ ಪವಿತ್ರ ಪ್ರಜಾಪ್ರಭುತ್ವ ದೇಶದ ಪ್ರಜೆಗಳಾದ ನಾವುಗಳು ಸಂವಿಧಾನದ ಆಶಯದಂತೆ ವಿದ್ಯಾವಂತರಾಗಿ, ಆಥಿ9ಕ , ಸಾಮಾಜಿಕ, ಶೈಕ್ಷಣಿಕ ಹಾಗೂ ರಾಜಕೀಯವಾಗಿ ಮುಂದೆ ಬರಬೇಕು. ಅನ್ಯ ಸಮಾಜದವರೊಂದಿಗೆ ಸ್ನೇಹ, ಸಹಬಾಳ್ವೆಯಿಂದ ಇದ್ದು, ತಮ್ಮ ಬದುಕನ್ನು ಸುಂದರವಾಗಿ ರೂಪಿಸಿಕೊಳ್ಳಿ ಎಂದು ಮಾರ್ಗದರ್ಶನ ನೀಡಿದರು.



ಸದ್ಗುರು ಆಯುರ್ವೇದಿಕ್ ಉತ್ಪನ್ನಗಳ ಮಾಲೀಕ ಡಿ.ಎಸ್.ಪ್ರದೀಪ್ ಮಾತನಾಡಿ, ದೇವರು ಧರ್ಮದ ಜೊತೆಯಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕು. ಅಂಬೇಡ್ಕರ್ ಅವರ ಆಶಯದಂತೆ ಪ್ರತಿ ಊರುಗಳಲ್ಲಿ ಗ್ರಂಥಾಲಯಗಳಿರಬೇಕು. ಶಿಕ್ಷಣದಿಂದ ಮಾತ್ರ ಒಂದು ಕುಟುಂಬದ ಎಲ್ಲಾ ಹಂತದ ಅಭಿವೃದ್ಧಿ ಸಾಧ್ಯ,ನಾವು ಕೂಡ ಹೆಚ್ಚು ಒತ್ತು ಕೊಡುತ್ತಿರುವುದು ಶಿಕ್ಷಣಕ್ಕೆ ಆಗಾಗಿ ಕೆಲವು ಪ್ರಾಥಮಿಕ ಶಾಲೆಗಳನ್ನು ದತ್ತು ಪಡೆಯುವ ಮೂಲಕ ಎಲ್ಲಾ ವಗ9ದ ಮಕ್ಕಳಿಗೆ ಶಿಕ್ಷಣ ಕೊಡಿಸುವ ಒಂದು ಸಣ್ಣ ಸಾಮಾಜಿಕ ಸೇವೆಯನ್ನು ನಮ್ಮ ಸಂಸ್ಥೆ ಮಾಡುತ್ತಿದೆ ಎಂದು ಮಾಹಿತಿ ನೀಡಿದರು.

ಮುಖ್ಯ ಅತಿಥಿಗಳಾಗಿ ಸಮಾಜ ಮುಖಂಡ ಗೂಳಿಹಟ್ಟಿ ಕೃಷ್ಣಮೂತಿ9, ಮೈಸೂರಿನ ಪ್ರಧಾನ ಋತ್ವಿಜರಾದ ದಯಾನಂದ ಶರ್ಮ, ಶಿಲ್ಪಿ ಬಾಬುಚರಣ, ಇಂಜಿನಿಯರ್ ಹೆಚ್. ಅಂಜಿನಪ್ಪ, ಶಿಕ್ಷಕ ಆರ್. ನಾಗೇಶ್, ಗ್ರಾ.ಪಂ ಸದಸ್ಯ ಪ್ರಕಾಶ್, ಆರ್.ಡಿ.ಪಿ.ಆರ್ ಇಲಾಖೆಯ ಸೌಮ್ಯ ಕೆ, ಎಸ್.ಆರ್.ಟಿ.ಸಿ ಇಲಾಖೆಯ ಶಶಿರೇಖಾ, ಮುಖಂಡರುಗಳಾದ ರಂಗಪ್ಪ, ಬೆಳ್ಳುಳ್ಳಿ ರಂಗಪ್ಪ, ಔ .ಹನುಮಂತಪ್ಪ, ಶಿ.ಹನುಮಂತಪ್ಪ, ಪಿ .ಇ .ರವಿ , ಬಸವರಾಜ್, ಡಿ.ರಂಗಪ್ಪ, ಹೆಚ್.ರಾಜ್ ಕುಮಾರ್ , ಪಿ.ಹೆಚ್.ಲೋಕೇಶ್, ರಾಜ್ಯಸಂಪನ್ಮೂಲ ವ್ಯಕ್ತಿ ಪೀಲಾಪುರ ಆರ್ .ಕಂಠೇಶ್ ಸೇರಿದಂತೆ ಹಲವರಿದ್ದರು.

## ಫಾಸ್ಟ್ ನ್ಯೂಸ್

### ಜೆಇಇ ಪರೀಕ್ಷೆಯಲ್ಲಿ ಶೇ.94 ಅಂಕ ಪಡೆದ ಜೆ.ರೋಹಿಣಿ : ಅಭಿನಂದನೆ

» ಮೊದಲ ಪುಟದಿಂದ

ಗ್ರಾಮೀಣ ಭಾಗದಲ್ಲೇ ಹೆಚ್ಚು ವಿದ್ಯಾಭ್ಯಾಸ ಮಾಡಿದ ಜೆ.ರೋಹಿಣಿ ಜೆಇಇ ಪರೀಕ್ಷೆಯಲ್ಲೂ ಸಹ ತಮ್ಮ ಸಾಮರ್ಥ್ಯವನ್ನು ಸಾಬೀತು ಪಡಿಸಿರುವುದು ಸಂತಸ ವಿಷಯವೆಂದರು. ಪ್ರಸ್ತುತ ಜೆ.ರೋಹಿಣಿ ಚಿತ್ರದುರ್ಗದ ಎಸ್‌ಆರ್‌ಎಸ್ ಕಾಲೇಜಿನಲ್ಲಿ ಅಭ್ಯಾಸ ಮುಂದುವರೆಸಿದ್ದಾಳೆ.

ಈ ಸಂದರ್ಭದಲ್ಲಿ ವಿದ್ಯಾರ್ಥಿನಿ ತಾಯಿ ಲಕ್ಷ್ಮಿದೇವಿ, ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಸಿ.ಟಿ.ವೀರೇಶ್ ಶಿಕ್ಷಕರಾದ ಕೆಂಚವೀರನಹಳ್ಳಿ ಎನ್.ಮಲ್ಲೇಶ್, ಎಂ.ಎನ್.ಮೃತ್ಯುಂಜಯ, ಎಚ್.ಓ.ರಾಜಣ್ಣ, ಗ್ರಾಮದ ಮುಖಂಡರಾದ ಬಂಡೆರಂಗಪ್ಪ, ಎಚ್.ರವಿಕುಮಾರ್, ಜಿ.ಚಂದ್ರಣ್ಣ, ಪಿ.ಕಾಟನಾಯಕ ಮುಂತಾದವರು ಅಭಿನಂದಿಸಿದರು.

### ಶಾಸಕ ಚಂದ್ರಪ್ಪನವರಿಂದ ಸವಿತಾ ಮಹರ್ಷಿ ಜಯಂತಿ ಉದ್ಘಾಟನೆ



» **ಹೊಳಲ್ಕೆರೆ**

ವೃತ್ತಿ ಧರ್ಮ ಪಾಲಿಸುವ ಸಮಾಜ ಯಾವುದಾದರೂ ಇದ್ದರೆ ಅದು ಸವಿತಾ ಸಮಾಜ ಎಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಮೆಚ್ಚುಗೆ ವ್ಯಕ್ತಪಡಿಸಿದರು.

ಪಟ್ಟಣದ ಸವಿತಾ ಸಮಾಜದ ಸಮುದಾಯ ಭವನದಲ್ಲಿ ಸವಿತಾ ಮಹರ್ಷಿ ಜಯಂತಿಯನ್ನು ಉದ್ಘಾಟಿಸಿ ಮಾತನಾಡಿದ ಶಾಸಕ ಡಾ.ಎಂ.ಚಂದ್ರಪ್ಪ ಯಾವುದಾದರೂ ಸಮಾಜಕ್ಕೆ ಶೀಲವಂತ ಸಮಾಜ ಎನ್ನುವ ಹೆಸರಿದ್ದರೆ ಅದು ಸವಿತಾ ಸಮಾಜಕ್ಕೆ ಮಾತ್ರ. ಹಾಗಾಗಿ ನೀವುಗಳು ನಿಮ್ಮ ಜಾತಿಯನ್ನು ಹೇಳಿಕೊಳ್ಳಲು ಹಿಂಜರಿಯುವುದು ಬೇಡ. ಕೆಟ್ಟದ್ದೆ ಗೊತ್ತಿಲ್ಲದ ಸಮಾಜ ನಿಮ್ಮದು. ಬಿಹಾರದಂತ ದೊಡ್ಡ ರಾಜ್ಯಕ್ಕೆ ನಿಮ್ಮ ಸಮಾಜಕ್ಕೆ ಸೇರಿದ ಕರ್ಪೂರಿ ಠಾಕೂರ್‌ರವರನ್ನು ಮುಖ್ಯಮಂತ್ರಿಯನ್ನಾಗಿ ಮಾಡಲಾಗಿತ್ತು. ದೇಶದ ಪ್ರಧಾನಿ ನರೇಂದ್ರಮೋದಿರವರು ನಿಮ್ಮ ಸಮಾಜವನ್ನು ಎತ್ತರಕ್ಕೆ ಕೊಂಡೊಯ್ಯಬೇಕೆಂಬ ದೃಷ್ಠಿಯಿಂದ ಕರ್ಪೂರಿ ಠಾಕೂರ್‌ಗೆ ಮರಣೋತ್ತರ ಭಾರತ ರತ್ನ ಪ್ರಶಸ್ತಿ ನೀಡಿ ಗೌರವಿಸಿದ್ದಾರೆ. ಮದ್ಯಪಾನ ನಿಷೇದ ಮಾಡಿದ ಹೆಗ್ಗಳಿಕೆ ಕರ್ಪೂರಿ ಠಾಕೂರ್‌ಗೆ ಸಲ್ಲುತ್ತದೆ ಎಂದು ಸ್ಮರಿಸಿದರು.

ಜಾತಿ ಮುಖ್ಯವಲ್ಲ. ನಡವಳಿಕೆ ಭಾವನೆ ಶ್ರೇಷ್ಟವಾದುದು. ಅಧಿಕಾರ ಶಾಶ್ವತವಲ್ಲ. ಇಂದು ಇರುತ್ತೆ ನಾಳೆ ಹೋಗುತ್ತೆ. ಹಾಗಾಗಿ ಇರುವ ಸಮಯದಲ್ಲಿ ಹತ್ತಾರು ಜನಕ್ಕೆ ಒಳ್ಳೆಯದನ್ನು ಮಾಡಬೇಕು. ಕಳೆದ ಮೂವತ್ತು ವರ್ಷಗಳಿಂದ ಶಾಸಕನಾಗಿ ದುಡಿಯುತ್ತಿದ್ದೇನೆ. ನನ್ನ ಕ್ಷೇತ್ರದಲ್ಲಿ ಎಲ್ಲಿಗೆ ಹೋಗಲಿ ಅಲ್ಲಿ ಏನು ಸಮಸ್ಯೆಯಿದೆ ಎನ್ನುವುದನ್ನು ತಿಳಿದುಕೊಂಡು ಜನ ಕೇಳುವ ಮುನ್ನವೇ ಅವರಿಗೆ ಸೌಲಭ್ಯಗಳನ್ನು ಒದಗಿಸುತ್ತೇನೆ. ವೃತ್ತಿ ಧರ್ಮಕ್ಕೆ ಬೆಲೆ ಕೊಟ್ಟು ಕೆಲಸ ಮಾಡುವ ಸವಿತಾ ಸಮಾಜವನ್ನು ಪರಿಶಿಷ್ಟ ಜಾತಿಗೆ ಸೇರಿಸುವಲ್ಲಿ ಪ್ರಧಾನಿ ನರೇಂದ್ರಮೋದಿರವರು ದೊಡ್ಡ ಮನಸ್ಸು ಮಾಡುತ್ತಾರೆಂಬ ವಿಶ್ವಾಸವಿದೆ. ರಾಜ್ಯದಿಂದ ಕೇಂದ್ರಕ್ಕೆ ವರದಿ ಹೋಗಬೇಕು ಎಂದು ಹೇಳಿದರು. ತಾಲ್ಲೂಕು ಸವಿತಾ ಸಮಾಜದ ಅಧ್ಯಕ್ಷ ಆರ್.ರಾಜಪ್ಪ, ಪ್ರಧಾನ ಕಾರ್ಯದರ್ಶಿ ಗಿರೀಶ್, ತಹಶೀಲ್ದಾರ್ ಬೀಬಿ ಫಾತಿಮ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಸ್.ಶಿವಪ್ರಕಾಶ್, ಪುರಸಭೆ ಮಾಜಿ ಅಧ್ಯಕ್ಷ ಆರ್.ಎ.ಅಶೋಕ್, ಸದಸ್ಯರುಗಳಾದ ಮುರುಗೇಶ್, ಡಿ.ಸಿ.ಮೋಹನ್, ಪ್ರದೀಪ್‌ಕುಮಾರ್, ಶ್ರೀನಿವಾಸ್, ಸಾಯಿನಾಥ್, ಧ್ರುವಕುಮಾರ್, ರಾಘು, ತಿಪ್ಪೇಸ್ವಾಮಿ ಸಂಪಿಗೆ, ಹನುಮಂತಪ್ಪ, ನಾಗರಾಜ್, ಎನ್.ಡಿ.ಕುಮಾರ್ ಮತ್ತಿತರರು ಸವಿತಾ ಮಹರ್ಷಿ ಜಯಂತಿಯಲ್ಲಿ ಪಾಲ್ಗೊಂಡಿದ್ದರು.

### ತಾಲೂಕು ಡಿಎಸ್‌ಎಸ್ ಸಂಚಾಲಕರಾಗಿ ಕರಿಯಪ್ಪ ಅವಿರೋಧ ಆಯ್ಕೆ.

» **ಹೊಸದುರ್ಗ**

ಕರ್ನಾಟಕ ದಲಿತ ಸಂಘರ್ಷ ಸಮಿತಿ (ರಿ) ಪ್ರೊ.ಬಿ.ಕೃಷ್ಣಪ್ಪ ಸ್ಥಾಪಿತ ಸಂಘಟನೆಯ ಹೊಸದುರ್ಗ ತಾಲೂಕು ಸಮಿತಿಗೆ ನೂತನ ಸಂಚಾಲಕರನ್ನಾಗಿ ಕೆ.ಕರಿಯಪ್ಪ ಇವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು. ಡಿಎಸ್‌ಎಸ್ ಸಂಘಟನೆಯ ಚಿತ್ರದುರ್ಗ ಜಿಲ್ಲಾ ಸಮಿತಿಯ ಸಂಚಾಲಕ ಕೆಂಗುಂಟೆ ಜಯಪ್ಪ ಇವರ ನೇತೃತ್ವದಲ್ಲಿ ತಾಲೂಕು ಸಮಿತಿಯ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಸಂಚಾಲಕ ಸ್ಥಾನಕ್ಕೆ ಕೆ. ಕರಿಯಪ್ಪ, ಸಂಘಟನೆ ಸಂಚಾಲಕರಾಗಿ ಮಾರುತಿ ಹೊನ್ನೇನಹಳ್ಳಿ, ಮೂಡಲಗಿರಿ ನಾಕೀಕೆರೆ, ಕೃಷ್ಣ ಹೊಸದುರ್ಗ, ರಂಗಸ್ವಾಮಿ, ರಘು ಎಂ.ಜಿ.ದಿಬ್ಬ, ಶ್ರೀನಿವಾಸ್ ಎಸ್.ನೇರಲಕೆರೆ, ಪ್ರವೀಣ್ ಹರೇನಹಳ್ಳಿ, ಮಧು ಗೌಡ ಇವರುಗಳನ್ನು ಆಯ್ಕೆ ಮಾಡಿದ್ದು, ಇನ್ನೂ ಕಾರ್ಯಕಾರಿ ಸಮಿತಿ ಸದಸ್ಯರಾಗಿ ಚನ್ನಮೂರ್ತಿ, ಧನಂಜಯ್, ಅಂಜನಮೂರ್ತಿ, ಶಂಕರ್, ಕಿರಣ್, ಮಾರುತಿ, ಮೋಹನ್ ಅಂತಿಮ ಗೊಳಿಸಲಾಯಿತು.

---

### ಕ್ಷೇತ್ರದ ಯಾವ ಭಾಗದಲ್ಲೂ ಕುಡಿಯುವ ನೀರಿನ ತೊಂದರೆಯಾಗದಂತೆ ಜಾಗ್ರತೆ ವಹಿಸಿ

# ಅಧಿಕಾರಿಗಳು ಗ್ರಾಮೀಣ ಭಾಗದಲ್ಲೇ ವಾಸವಿದ್ದು ಜನರಿಗೆ ನೆರವಾಗಿ: ಶಾಸಕ ಟಿ.ರಘುಮೂರ್ತಿ



» **ಚಳ್ಳಕೆರೆ**

ಕ್ಷೇತ್ರದ ಜನತೆ ಈಗಾಗಲೇ ಬಿರುಬಿಸಿಲಿನ ತಾಪಕ್ಕೆ ಹೈರಾಣಾಗಿದ್ದಾರೆ. ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣವಾಗುತ್ತಿದ್ದು, ಪ್ರತಿನಿತ್ಯ ಗ್ರಾಮದ ಜನರು ದೂರವಾಣಿಮೂಲಕ ಕುಡಿಯುವ ನೀರಿನ ಸಮಸ್ಯೆಯನ್ನು ಒತ್ತಿ ಹೇಳುತ್ತಿದ್ದಾರೆ. ಯಾವುದೇ ಗ್ರಾಮದಲ್ಲಿ ಕುಡಿಯುವ ನೀರು ತೊಂದರೆ ಉಂಟಾಗದಂತೆ ಇಒ ಹಾಗೂ ಸಂಬಂಧಪಟ್ಟ ಪಿಡಿಒಗಳು ಜವಾಬ್ದಾರಿ ತೆಗೆದುಕೊಳ್ಳಬೇಕು. ಸಾರ್ವಜನಿಕರು ಕುಡಿಯುವ ನೀರಿನ ತೊಂದರೆ ಆಗದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕೆಂದು ಕ್ಷೇತ್ರದ ಶಾಸಕರು, ಸಣ್ಣಕೈಗಾರಿಕೆಗಳ ಮಂಡಳಿ ಅಧ್ಯಕ್ಷರು ಟಿ.ರಘುಮೂರ್ತಿ ತಿಳಿಸಿದರು. ಅವರು, ಸೋಮವಾರ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ತಾಲ್ಲೂಕು ಮಟ್ಟದ ವಿವಿಧ ಇಲಾಖೆ ಅಧಿಕಾರಿಗಳು, ಪಂಚಾಯಿತಿ ಅಭಿವೃದ್ದಿ ಅಧಿಕಾರಿಗಳು, ಕಂದಾಯ ಅಧಿಕಾರಿಗಳು, ಗ್ರಾಮ ಲೆಕ್ಕಾಧಿಗಳ ತುರ್ತು ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಕುಡಿಯುವ ನೀರಿನ ಸಮಸ್ಯೆ ಉಂಟಾದರೆ ಸಂಬಂಧಪಟ್ಟ ಅಧಿಕಾರಿಯನ್ನೇ ಜವಾಬ್ದಾರಿಯುತನನ್ನಾಗಿ ಮಾಡಲಾಗುವುದು. ಸರ್ಕಾರ ಈಗಾಗಲೇ ಕುಡಿಯುವ ನೀರಿಗಾಗಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಣಾಧಿಕಾರಿಗಳಿಗೆ ಹಣ ಬಿಡುಗಡೆ ಮಾಡಿದ್ದು, ಸದರಿ ಹಣದಿಂದ ಜನರ ಕುಡಿಯುವ ನೀರಿನ ಸಮಸ್ಯೆ ನಿವಾರಣೆ ಮಾಡುವಂತೆ ಸೂಚನೆ ನೀಡಿದರು. ಗ್ರಾಮೀಣ ಭಾಗಗಳಲ್ಲಿ ಬಡ ಜನರಿಗೆ ನಿವೇಶನ ಹಂಚಿಕೆ ಹಾಗೂ ಸನ್ಮಾಶಗಳ ಬಗ್ಗೆ ಮಾತನಾಡಿದ ಶಾಸಕರು, ಈಗಾಗಲೇ ಹಲವಾರು ಬಾರಿ ಸಭೆ ನಡೆಸಿ ಸೂಚನೆ ನೀಡಲಾಗಿದೆ. ಸದ್ಯದ ಸ್ಥಿತಿಯಲ್ಲಿ ಕುಡಿಯುವ ನೀರಿನ ಸಮಸ್ಯೆಗೆ ಮೊದಲ ಆದ್ಯತೆ ನೀಡಲಾಗುತ್ತದೆ. ಮುಂಬರುವ ಸಭೆಯಲ್ಲಿ ನಿವೇಶನ ಹಾಗೂ ಸನ್ಮಾಶನಗಳ ಸ್ಥಿತಿಯ ಬಗ್ಗೆ ಅವಲೋಕನ ಮಾಡಲಾಗುವುದು. ಗ್ರಾಮೀಣ ಪ್ರದೇಶದಲ್ಲಿ ರಸ್ತೆಗೆ ಅಡ್ಡಲಾಗಿ ಬೆಳೆದ ಜಾಲಿಯನ್ನು ತೆರವುಗೊಳಿಸುವ ವಿಚಾರ ಪ್ರಶ್ನಿಸಿದಾಗ ಎಇಇ ಎನ್.ಕಾವ್ಯ ಮಾಹಿತಿ ನೀಡಿ, ಕ್ಷೇತ್ರದ ಒಟ್ಟು 51 ರಸ್ತೆಗಳ ಎರಡೂ ಬದಿಯಲ್ಲಿ ಜಾಲಿ ಗಿಡಗಳ ತೆರವು ಮಾಡುವ ಕಾರ್ಯ ಆರಂಭವಾಗಿದೆ. ಒಂದು ರಸ್ತೆಗೆ 23 ಸಾವಿರದಂತೆ ಒಟ್ಟು 11 ಲಕ್ಷ ಹಣ ಬಿಡುಗಡೆ ಮಾಡಿದ್ದು, ಈಗಾಗಲೇ ಕಾಮಗಾರಿ ಪ್ರಾರಂಭಿಸಿದ್ದು, ಮಾರ್ಚ್ 10ರೊಳಗೆ ಈ ಕೆಲಸ ಪೂರ್ಣಗೊಳಿಸಲಾಗುವುದು.

ಗ್ರಾಮೀಣ ಭಾಗಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಣೆ ಮಾಡುವ ನಿಟ್ಟಿನಲ್ಲಿ ಅಭಿವೃದ್ದಿ ಅಧಿಕಾರಿಗಳು ಖಾಸಗಿ ಜಮೀನಿನಲ್ಲಿ ಸಮೃದ್ದ ನೀರು ದೊರೆತರೆ ಅವರೊಡನೆ ಚರ್ಚಿಸಿ ಗ್ರಾಮಕ್ಕೆ ನೀರು ಒದಗಿಸುವ ಕಾರ್ಯ ಮಾಡಬೇಕು ಎಂದರು. ಅಗತ್ಯವಿರುವ ಕಡೆ ಕೊಳವೆಬಾವಿ ದುರಸ್ಥಿ ಮಾಡುವಂತೆ ಸೂಚಿಸಿದರು. ಸಣ್ಣಕೈಗಾರಿಕೆ ಅಭಿವೃದ್ದಿ ನಿಗಮದ ಅಧ್ಯಕ್ಷ ಸ್ಥಾನ ವಹಿಸಿದ ನಂತರ ಮೊದಲ ಬಾರಿಗೆ ಆಗಮಿಸಿ ಸಭೆಯಲ್ಲಿ ಭಾಗವಹಿಸಿ ಶಾಸಕ ಟಿ.ರಘುಮೂರ್ತಿ ಸರ್ಕಾರಿನೌಕರರ ಸಂಘ, ಸರ್ಕಾರಿ ಎಚ್‌ಪಿಪಿಸಿ ಪ್ರಥಮ ದರ್ಜೆ ಕಾಲೇಜು, ಡಿವೈಎಸ್ಪಿ ರಾಜಣ್ಣ ಸೇರಿದಂತೆ ಹಲವಾರು ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಶುಭಹಾರೈಸಿದರು. ಸಭೆಯಲ್ಲಿ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ತಹಶೀಲ್ದಾರ್ ರೇಹಾನ್‌ಪಾಷ, ಚಿತ್ರದುರ್ಗ ತಹಶೀಲ್ದಾರ್ ನಾಗವೇಣಮ್ಮ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ಶಶಿಧರ, ಚಿತ್ರದುರ್ಗ ಇಒ ಹನುಮಂತಪ್ಪ, ಪೌರಾಯುಕ್ತ ಸಿ.ಚಂದ್ರಪ್ಪ ಮುಂತಾದವರು ಉಪಸ್ಥಿತರಿದ್ದರು.

---

# ತಾಲೂಕು ಕುಂಬಾರ ಸಮಾಜಕ್ಕೆ 50 ಲಕ್ಷ ರು. ಅನುದಾನದ ಭರವಸೆ ಬಿಡುಗಡೆ: ಡಾ.ಎಂ.ಚಂದ್ರಪ್ಪ



» **ಹೊಳಲ್ಕೆರೆ**

ಅಂಕು ಡೊಂಕುಗಳನ್ನು ತಿದ್ದಿ ಸಮಾಜದ ಸುಧಾರಣೆಗೆ ಶ್ರಮಿಸಿದ ತ್ರಿಪದಿಯ ಬ್ರಹ್ಮ ಸರ್ವಜ್ಞನ ಸಂದೇಶಗಳನ್ನು ಪ್ರತಿಯೊಬ್ಬರೂ ಬದುಕಿಗೆ ಅಳವಡಿಸಿಕೊಳ್ಳಬೇಕೆಂದು ಶಾಸಕ ಡಾ.ಎಂ.ಚಂದ್ರಪ್ಪ ತಿಳಿಸಿದರು.

ತಾಲೂಕು ರಾಷ್ಟೀಯ ಹಬ್ಬಗಳ ಆಚರಣೆ ಸಮಿತಿ ವತಿಯಿಂದ ತಾಲೂಕು ಕಚೇರಿ ಆವರಣದಲ್ಲಿ ಹಮ್ಮಿಕೊಂಡಿದ್ದ ಸರ್ವಜ್ಞ ಜಯಂತಿಯಲ್ಲಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು.

ಸರ್ವಜ್ಞತ್ರಿಕಲಾಜ್ಞಾನಿಯಂತೆಸಮಾಜದಲ್ಲಿರುವ ಸತ್ಯ ಘಟನೆಗಳನ್ನು ತ್ರಿಪದಿ ಮೂಲಕ ಅನಾವರಣ ಗೊಳಿಸಿದ್ದಾರೆ. ತ್ರಿಪದಿಯಲ್ಲಿನ ಮಾನವೀಯ ಮೌಲ್ಯದ ಸಂದೇಶಗಳು ನಿಜಕ್ಕೂ ಜನ ಮಾನಸವನ್ನ ತಲುಪಬೇಕು. ಸಾಮಾಜಿಕ ಪರಿವರ್ತನೆಗೆ ಮುನ್ನುಡಿ ಬರೆಯಬೇಕೆಂದರು.

ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ತಮಿಳುನಾಡಿನ ಸರ್ವಜ್ಞ ಮೂರ್ತಿಯನ್ನು ಪ್ರತಿಷ್ಠಾಪಿಸಲು ಶ್ರಮಿಸಿ ಸರ್ವಜ್ಞರ ಚಿಂತನೆಯನ್ನು ಭಿತ್ತರಿಸಿದರು. ಸರ್ವಜ್ಞ ಅನುಯಾಯಿಗಳಾಗಿರುವ ಕುಂಬಾರ ಸಮುದಾಯ ಶ್ರದ್ಧಾಭಕ್ತಿ ಪ್ರಾಮಾಣಿಕತನಕ್ಕೆ ಹೆಸರಾಗಿದೆ.ಭಕ್ತಕುಂಬಾರನಚಲನಚಿತ್ರಭಕ್ತಿಯನ್ನು ಭಕ್ತಿಯ ಶ್ರೇಷ್ಠತೆಯನ್ನು ಅನಾವರಣಗೊಳಿಸುತ್ತದೆ. ಕಾಯಕಯೋಗಿಯಂತೆ ಸಮಾಜದ ಕಲ್ಯಾಣಕೆ ಕುಂಬಾರ ಸಮುದಾಯ ಸಾಕಷ್ಟು ಕೊಡುಗೆ ನೀಡಿದೆ. ಹಾಗಾಗಿ ಕುಂಬಾರ ಸಮುದಾಯವನ್ನು ಹಾರ್ದಿಕ ಮತ್ತು ಸಾಮಾಜಿಕವಾಗಿ ಬಲಿಷ್ಟ ಗೊಳಿಸಲು ಐವತ್ತು ಲಕ್ಷ ಅನುದಾನದಲ್ಲಿ ಸಮುದಾಯ ಭವನವನ್ನು ನಿರ್ಮಾಣ ಮಾಡಿಕೊಡಲಾಗುತ್ತದೆ. ಜೊತೆಗೆ ಗಂಗಾ ಕಲ್ಯಾಣ ಯೋಜನೆ, ಕುಶಲಕರ್ಮಿಗಳಿಗೆ ಸಾಲದ ಸೌಲಭ್ಯಗಳನ್ನು ಕಲ್ಪಿಸಿಕೊಡಲಾಗುತ್ತದೆ.

ಹೊಳಲ್ಕೆರೆ ಪಟ್ಟಣದ ಒಂದನೇ ಕುಂಬಾರ ಸಮುದಾಯಕ್ಕೆ ಮನೆಗಳನ್ನು ಕಲ್ಪಿಸಿಕೊಡಲು 120 ಮನೆಗಳನ್ನು ಮಂಜೂರು ಮಾಡಿಸಿಕೊಡಲಾಗಿದೆ. ಸಮುದಾಯ ಸಬಲೀಕರಣಗೊಳ್ಳಲು ನಿರಂತರವಾಗಿ ಬೆನ್ನೆಲುಬಿನಂತೆ ಶ್ರಮಿಸುತ್ತೇನೆ ಎಂದು ತಿಳಿಸಿದರು.

ವಕೀಲರಾದ ಎಸ್.ವೇದಮೂರ್ತಿ ಪ್ರಾಥಮಿಕವಾಗಿ ಮಾತನಾಡಿ, 12ನೇ ಶತಮಾನದ ಬಸವಾದಿ ಶರಣರಿಂದ ಇಲ್ಲಿಯತನಕ ಸಾಕಷ್ಟು ಸಾಧಕರು ವಚನಗಳಲ್ಲಿ, ತ್ರಿಪದಿಗಳಲ್ಲಿ ದಾಸ ಗೀತೆಗಳಲ್ಲಿ ಸಮಾಜದ ಸುಧಾರಣೆಗೆ ಸಾಕಷ್ಟು ಸಂದೇಶಗಳನ್ನು ನೀಡಿದ್ದಾರೆ. ಸರ್ವಜ್ಞ ತನ್ನ ತ್ರಿಪದಿ ಮೂಲಕ ಸಾಮಾಜಿಕ ಪರಿವರ್ತನೆಗೆ ಸತ್ಯ ಘಟನೆಗಳನ್ನು ತಿಳಿಸಿದ್ದಾನೆ ಎಂದು ತಿಳಿಸಿದರು.

ತಹಸಿಲ್ದಾರ್ ಬಿ.ಬಿ ಪಾತಿಮಾ ಮಾತನಾಡಿ, ಸರ್ವಜ್ಞ ಚಿಂತನೆಗಳು ಸದಾ ಕಾಲ ಜನ ಮಾನಸ ತಲುಪಬೇಕು ಎನ್ನುವ ಉದ್ದೇಶದಿಂದ ಸಮಿತಿಯಿಂದ ಜಯಂತಿಯನ್ನು ಕೈಗೊಂಡು ಜನ ಜಾಗೃತಿ ಮೂಡಿಸಲಾಗುತ್ತದೆ ಎಂದು ತಿಳಿಸಿದರು.

ಪುರಸಭೆಯ ಸದಸ್ಯರಾದ ಪಿಎಚ್ ಮುರುಗೇಶ್, ಹೆಚ್.ಆರ್.ನಾಗರತ್ನ ವೇದಮೂರ್ತಿ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಲೋಕೇಶ್, ಕಾರ್ಯನಿರ್ವಾಣಾಧಿಕಾರಿ ಶ್ರೀನಿವಾಸ್, ಕುಂಬಾರ ಸಮುದಾಯದ ಮುಖಂಡರಾದ ವಿರೂಪಾಕ್ಷಪ್ಪ, ಮಲ್ಲೇಶಪ್ಪ, ನಾಗರಾಜ ,ಹಾಲೇಶಪ್ಪ, ರುದ್ರೇಶ್ ಸೇರಿದಂತೆ ಸರ್ಕಾರಿ ನೌಕರರು ವಿವಿಧ ಇಲಾಖೆ ಮುಖ್ಯಸ್ಥರು ಸಾರ್ವಜನಿಕರು ಪಾಲ್ಗೊಂಡಿದ್ದರು.

---

## ಕವಿ ಸರ್ವಜ್ಞರ ಜಯಂತಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿದ ಚಂದ್ರಪ್ಪ



» **ಹೊಳಲ್ಕೆರೆ**

ಕಾಯಕ ಪ್ರಜ್ಞೆ, ಭಕ್ತಿಗೆ ಹೆಸರುವಾಸಿಯಾದವರು ಕುಂಬಾರ ಸಮಾಜ ಎಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು. ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಕವಿ ಸರ್ವಜ್ಞರ ಜಯಂತಿಯಲ್ಲಿ ಭಾಗವಹಿಸಿ ಮಾತನಾಡಿದರು.ಇಂತಹ ಮಹನೀಯರ ಜಯಂತಿಯನ್ನು ಸರ್ಕಾರದಿಂದ ಆಚರಿಸುತ್ತಿರುವುದು ಅರ್ಥಪೂರ್ಣವಾಗಿದೆ. ಸರ್ವಜ್ಞನ ಒಂದೊಂದು ವಚನಗಳು ಸಮಾಜಕ್ಕೆ ಬೆಳಕು ಚೆಲ್ಲುವಂತಿದೆ. ನಮ್ಮ ನಾಡಿಗಷ್ಟೆ ಅಲ್ಲ. ಇಡಿ ದೇಶಕ್ಕೆ ಸರ್ವಜ್ಞ ಹೆಸರುವಾಸಿಯಾಗಿದ್ದಾರೆ. ಕರ್ನಾಟಕದಲ್ಲಿ ತಿರುವಳ್ಳವರ್ ಪ್ರತಿಮೆಯನ್ನು ನಿರ್ಮಿಸುವಂತೆ ತಮಿಳುನಾಡು ಷರತ್ತು ಹಾಕಿದಾಗ ಅಂದಿನ ಮುಖ್ಯಮಂತ್ರಿಯಾಗಿದ್ದ ಬಿ.ಎಸ್.ಯಡಿಯೂರಪ್ಪನವರು ಸರ್ವಜ್ಞನ ಪ್ರತಿಮೆಯನ್ನು ತಮಿಳುನಾಡಿನಲ್ಲಿ ಪ್ರತಿಷ್ಠಾಪಿಸುವಂತೆ ಹೇಳಿದ್ದರು. ಅದರಂತೆ ಅಲ್ಲಿ ಬೃಹತ್ತಾದ ಪ್ರತಿಮೆ ನಿರ್ಮಾಣವಾಗಿದೆ ಎಂದು ನೆನಪಿಸಿಕೊಂಡರು.ಮಾನವೀಯ ಮನುಷ್ಯತ್ವಕ್ಕೆ ಹೆಸರುವಾಸಿಯಾಗಿರುವ ಕುಂಬಾರ ಸಮಾಜ ಯಾರಿಗೂ ಅನ್ಯಾಯ ಕೆಟ್ಟದ್ದು, ಮಾಡಿದವರಲ್ಲ. ಚುನಾವಣೆಯಲ್ಲಿ ನನಗೆ ಎಲ್ಲಾ ರೀತಿಯ ಸಹಕಾರ ನೀಡಿದ್ದೀರಿ. ನಿಮ್ಮ ಋಣ ನನ್ನ ಮೇಲಿದೆ. ಸಮುದಾಯ ಭವನ ನಿರ್ಮಾಣಕ್ಕೆ ಇಪ್ಪತ್ತು ಲಕ್ಷ ರೂ.ಗಳನ್ನು ಕೇಳಿದ್ದೀರಿ. ಇಷ್ಟು ಹಣ ಸಾಕಾಗುವುದಿಲ್ಲ. ಐವತ್ತು ಲಕ್ಷ ರೂ.ಗಳನ್ನು ಮಂಜೂರು ಮಾಡುತ್ತೇನೆ. ವಿಶಾಲವಾದ ಸಮುದಾಯ ಭವನ ಹಾಗೂ ಕಾಂಪ್ಲೆಕ್ಸ್ ನಿರ್ಮಾಣ ಮಾಡಿಕೊಳ್ಳುವಂತೆ ಶಾಸಕ ಡಾ.ಎಂ.ಚಂದ್ರಪ್ಪ ಸೂಚಿಸಿದರು. ಕುಂಬಾರ ಜನಾಂಗದವರು ವಾಸಿಸುತ್ತಿದ್ದ ಕರಿ ಹಂಚಿನ ಮನೆಗಳನ್ನು ಕೆಡವಿ 120 ಮನೆಗಳನ್ನು ಕಟ್ಟಿಸಿಕೊಟ್ಟಿದ್ದೇನೆ. ಸಂಸ್ಕೃತಿ, ಸಂಸ್ಕಾರವಿಟ್ಟುಕೊಂಡಿರುವ ಸಮಾಜ ನಿಮ್ಮದು. ಗಂಗಾ ಕಲ್ಯಾಣ ಯೋಜನೆಯಡಿ ನಿಮ್ಮ ಜಮೀನುಗಳಲ್ಲಿ ಬೋರ್ ಕೊರೆಸಿ ಪಂಪ್, ಮೋಟಾರ್, ಟಿ.ಸಿ.ಯನ್ನು ಕೊಡುತ್ತೇನೆಂದು ಭರವಸೆ ನೀಡಿದರು. ಕುಂಬಾರ ಸಮಾಜದ ಅಧ್ಯಕ್ಷ ರುದ್ರಪ್ಪ, ತಹಶೀಲ್ದಾರ್ ಶ್ರೀಮತಿ ಬೀಬಿ ಫಾತಿಮ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಶಿವಪ್ರಕಾಶ್, ಪುರುಸಭೆ ಸದಸ್ಯರುಗಳಾದ ಮುರುಗೇಶ್, ಶ್ರೀಮತಿ ನಾಗರತ್ನ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಲೋಕೇಶ್ ಜಯಂತಿಯಲ್ಲಿ ಭಾಗವಹಿಸಿದ್ದರು.

---

## ಪ್ರಮುಖ ಸುದ್ದಿ

### ಕಾನೂನು ಅರಿವು-ನೆರವು ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್

# ಸಂವಿಧಾನದ ಆಶಯ ಎತ್ತಿ ಹಿಡಿಯಲು ಎಲ್ಲರೂ ಶ್ರಮಿಸೋಣ

» **ಚಿತ್ರದುರ್ಗ**

ಸಂವಿಧಾನ ಪೀಠಿಕೆಯೇ ಸಂವಿಧಾನದ ಆಶಯಗಳು. ಸಂವಿಧಾನದ ಆಶಯಗಳನ್ನು ಎತ್ತಿಹಿಡಿಯುವಲ್ಲಿ ನಾವೆಲ್ಲರೂ ಕೈಜೋಡಿಸೋಣ ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ವಕೀಲರ ಸಂಘ ಹಾಗೂ ಸರಸ್ವತಿ ಕಾನೂನು ಕಾಲೇಜ್ ಸಹಯೋಗದಲ್ಲಿ ಮಂಗಳವಾರ ಆಯೋಜಿಸಲಾಗಿದ್ದ ವಿಶ್ವ ಸಾಮಾಜಿಕ ನ್ಯಾಯ ದಿನಾಚರಣೆ ಅಂಗವಾಗಿ "ಸಂವಿಧಾನ ದೃಷ್ಠಿಯಲ್ಲಿ ಸಾಮಾಜಿಕ ನ್ಯಾಯ" ಕುರಿತ ಕಾನೂನು ಅರಿವು-ನೆರವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಮಾಜದಲ್ಲಿರುವ ಅಸಮಾನತೆ ಹೋಗಲಾಡಿಸಿ, ಹಿಂದುಳಿದವರನ್ನು ಮುಖ್ಯವಾಹಿನಿಗೆ ತರುವುದೇ ಸಾಮಾಜಿಕ ನ್ಯಾಯ ಹಾಗೂ ಸಂವಿಧಾನದ ಆಶಯ ಕೂಡ ಹೌದು. ಸಂವಿಧಾನದ ಪೀಠಿಕೆಯಂತೆ ಪ್ರತಿಯೊಬ್ಬ ನಾಗರೀಕನಿಗೂ ಸಮಾನತೆ ಮತ್ತು ಸಾಮಾಜಿಕ ನ್ಯಾಯ ದೊರೆಯಬೇಕು ಎಂದು ಹೇಳಿದರು.



ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಮಾತನಾಡಿ, ಅನ್ಯಾಯಕ್ಕೆ, ತುಳಿತಕ್ಕೆ, ಒಳಪಟ್ಟ ದುರ್ಬಲರಿಗೆ ಅಂತರಾತ್ಮದಿಂದ ಅವರಿಗೆ ನ್ಯಾಯ ಒದಗಿಸಿ ಕೊಡುವ ಮೂಲಕ ಸಾಮಾಜಿಕ ನ್ಯಾಯ, ಕಾನೂನು, ಸಂವಿಧಾನದ ಮಹತ್ವ ತಿಳಿಸಬೇಕು. ಡಾ. ಅಂಬೇಡ್ಕರ್ ಅವರು ರಚಿಸಿದ ಸಂವಿಧಾನದ ಪೀಠಿಕೆಯಲ್ಲಿಯೇ ಸಾಮಾಜಿಕ ನ್ಯಾಯದ ಪರಿಕಲ್ಪನೆ ಇದೆ. ಸಂವಿಧಾನದ ಆಶಯ, ಪೀಠಿಕೆ, ಕಾನೂನುಗಳನ್ನು ತಿಳಿದು ಜನರಿಗೆ ಅರಿವು ಮೂಡಿಸಿದಲ್ಲಿ ಸಾಮಾಜಿಕ ನ್ಯಾಯದ ಪರಿಕಲ್ಪನೆ ಸಾರ್ಥಕವಾಗುವುದು ಎಂದು ಹೇಳಿದರು.

ಸಂವಿಧಾನ ಜಾಗೃತಿ ಅಂಗವಾಗಿ ಸಂವಿಧಾನದ ಪೀಠಿಕೆಯನ್ನು ಇದೇ ಸಂದರ್ಭದಲ್ಲಿ ಬೋಧಿಸಲಾಯಿತು. ಸಮಾರಂಭದಲ್ಲಿ ಹಾಜರಿದ್ದ ಎಲ್ಲರೂ ಸಂವಿಧಾನದ ಪೀಠಿಕೆಯನ್ನು ವಾಚನ ಮಾಡಿ ಪ್ರತಿಜ್ಞಾ ವಿಧಿ ಸ್ವೀಕರಿಸಿದರು.

ಸರಸ್ವತಿ ಕಾನೂನು ಕಾಲೇಜಿನ ಪ್ರಾಂಶುಪಾಲೆ ಎಂ.ಎಸ್. ಸುಧಾದೇವಿ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ವಕೀಲರ ಸಂಘದ ಅಧ್ಯಕ್ಷ ವೈ. ತಿಪ್ಪೇಸ್ವಾಮಿ, ಉಪಾಧ್ಯಕ್ಷ ಬಿ.ಎಂ.ಅನಿಲ್ ಕುಮಾರ್, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು, ವಸತಿ ನಿಲಯಗಳ ಮೇಲ್ವಿಚಾರಕರು, ಹಾಗೂ ಸರಸ್ವತಿ ಕಾನೂನು ಕಾಲೇಜಿನ ವಿದ್ಯಾರ್ಥಿಗಳು ಇದ್ದರು.

## ಫಾಸ್ಟ್ ನ್ಯೂಸ್

### ಬೆಳೆ ವಿಮಾ ಆಕ್ಷೇಪಣೆ ಸಲ್ಲಿಸಲು ಮಾರ್ಚ್ 4 ರಂದು ಕೊನೆ ದಿನ

» **ಹೊಸದುರ್ಗ**


2022-23ನೇ ಸಾಲಿನ ಫಸಲ್ ಬೀಮಾ ಯೋಜನೆಯಡಿ ಬೆಳೆ ವಿಮೆಯ 1658 ರೈತರ ಪ್ರಸ್ತಾವನೆಗಳು ತಿರಸ್ಕೃತಗೊಂಡಿದ್ದು, ಆಕ್ಷೇಪಣೆ ಸಲ್ಲಿಸಲು ಮಾರ್ಚ್ 4 ರಂದು ಕಡೆ ದಿನವಾಗಿದೆ ಎಂದು ತಾಲ್ಲೂಕು ಕೃಷಿ ಇಲಾಖೆಯ ಸಹಾಯಕ ಕೃಷಿ ನಿರ್ದೇಶಕ ಡಾ: ಸಿ.ಎಸ್.ಈಶ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು 2022-23ನೇ ಸಾಲಿನ ಮುಂಗಾರು ಹಾಗೂ ಹಿಂಗಾರು ಹಂಗಾಮಿನಲ್ಲಿ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿ ಬೆಳೆ ವಿಮೆ ನೊಂದಣಿ ಮಾಡಿಕೊಂಡ ರೈತರ ಪ್ರಸ್ತಾವನೆಗಳನ್ನು ಬೆಳೆ ಸಮೀಕ್ಷೆ ದತ್ತಾಂಶದೊಂದಿಗೆ ಹೋಲಿಕೆ ಮಾಡಿದಾಗ ತಾಳೆಯಾಗದೇ ಇರುವ ಮುಂಗಾರು ಹಂಗಾಮಿನ ಹಾಗು ಹಿಂಗಾರು ಹಂಗಾಮಿನ ಒಟ್ಟು 1658 ರೈತರ ಪ್ರಸ್ತಾವನೆಗಳು ತಿರಸ್ಕೃತಗೊಂಡಿವೆ. ಅಂತಹ ರೈತರ ಮಾಹಿತಿಯನ್ನು ಆಯಾ ಹೋಬಳಿಯ ರೈತ ಸಂಪರ್ಕ ಕೇಂದ್ರ ಹಾಗೂ ಗ್ರಾಮ ಪಂಚಾಯಿತಿ ನೋಟಿಸ್ ಬೋರ್ಡ್‌ಗಳಲ್ಲಿ ಪ್ರಕಟಿಸಲಾಗಿದ್ದು ಆಕ್ಷೇಪಣೆ ಸಲ್ಲಿಸುವವರು ಅರ್ಜಿಯೊಂದಿಗೆ 2022-23ನೇ ಸಾಲಿನ ಬೆಳೆವಿಮೆಗೆ ನೋಂದಾಯಿಸಿರುವ ಬೆಳೆ ನಮೂದಾಗಿರುವ ಪಹಣಿ ಅಥವಾ ಬೆಂಬಲ ಬೆಲೆ ಪ್ರಯೋಜನಾ ಪಡೆದಿದ್ದಲ್ಲಿ ಅದರ ರಶೀದಿ ಅಥವಾ ಎ.ಪಿ.ಎಂ.ಸಿ. ಮಾರುಕಟ್ಟೆಯಲ್ಲಿ ಬೆಳೆ ಮಾರಾಟ ಮಾಡಿದಲ್ಲಿ ಸಂಬಂಧಪಟ್ಟ ದಾಖಲೆಗಳನ್ನು ಸಲ್ಲಿಸಬಹುದು. ಮಾರ್ಚ್ 4 ರೊಳಗಾಗಿ ಆಕ್ಷೇಪಣೆ ಸಲ್ಲಿಸಲು ರೈತರಿಗೆ ಅವಕಾಶ ನೀಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

### ಬೈಕ್ ಡಿಕ್ಕಿ ಮಹಿಳೆ ಸ್ಥಳದಲ್ಲೆ ಸಾವು: ಬೈಕ್ ಸವಾರನಿಗೆ ಪೆಟ್ಟು ಆಸ್ಪತ್ರೆಗೆ ದಾಖಲು

» **ಹೊಸದುರ್ಗ**

ರಸ್ತೆಯ ಬದಿಯಲ್ಲಿ ನಡೆದುಕೊಂಡು ಹೋಗುತ್ತಿದ್ದ ಮಹಿಳೆಯೋರ್ವರಿಗೆಯುವಕನೋರ್ವ ಬೈಕಿನಲ್ಲಿ ಬಂದು ಎಕಾಎಕಿ ಡಿಕ್ಕಿ ಪಡಿಸಿದ ಪರಿಣಾಮ ಮಹಿಳೇಯೋರ್ವರು ಸ್ಥಳದಲ್ಲೆ ಸಾವನ್ನಪ್ಪಿರುವ ಘಟನೆ ತಾಲೂಕಿನ ಗೋರವಗೊಂಡನಹಳ್ಳಿ ಮುಖ್ಯ ರಸ್ತೆಯಲ್ಲಿ ಸೋಮವಾರ ಮಧ್ಯಾಹ್ನ ಸಂಭವಿಸಿದೆ.ಮೃತ ಮಹಿಳೆಯನ್ನು ಗೋರವಗೊಂಡನಹಳ್ಳಿ ಗ್ರಾಮದ ಮಂಜುನಾಥ ಎಂಬುವವರ ಪತ್ನಿ ಮೀನಾಕ್ಷಮ್ಮ (42) ಎಂದು ತಿಳಿದು ಬಂದಿದ್ದು ತಾಲೂಕಿನ ಹುಣವಿನೊಡು ಗ್ರಾಮದ ಯುವಕ ದರ್ಶನ್ (22) ಎಂಬುವವನು ಅತಿವೇಗ ಹಾಗೂ ಅಜಾಗರೂಕತೆಯಿಂದ ಬೈಕ್ ಚಲಾಯಿಸಿಕೊಂಡು ಬಂದು ಮಹಿಳೆಗೆ ಡಿಕ್ಕಿ ಪಡಿಸಿದ ಪರಿಣಾಮ ಈ ಘಟನೆ ಜರುಗಿದ್ದು ಬೈಕ್ ಚಾಲಕ ದರ್ಶನ್ ಎಂಬುವವನಿಗೂ ಕೂಡ ಪೆಟ್ಟಾಗಿದ್ದು ಹೊಸದುರ್ಗ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಹೆಚ್ಚಿನ ಚಿಕಿತ್ಸೆಗಾಗಿ ಚಿತ್ರದುರ್ಗ ಆಸ್ಪತ್ರೆಗೆ ದಾಖಲಿಸಲಾಗಿದ್ದು ಈ ಬಗ್ಗೆ ಹೊಸದುರ್ಗ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಜೆ.ಇ.ಇ ಪರೀಕ್ಷೆ : ಎಸ್.ನಿಜಲಿಂಗಪ್ಪ ಶಿಕ್ಷಣ ಸಂಸ್ಥೆಯ ನಾಲ್ಕು ವಿದ್ಯಾರ್ಥಿಗಳು ಆಯ್ಕೆ






» **ಹೊಸದುರ್ಗ**

ಪಟ್ಟಣದ ಎಸ್. ನಿಜಲಿಂಗಪ್ಪ ಸ್ವತಂತ್ರ ಪದವಿ ಪೂರ್ವ ಕಾಲೇಜಿನ ವಾಣಿಜ್ಯ ಹಾಗೂ ವಿಜ್ಞಾನ ವಿಭಾಗದಲ್ಲಿನ 36 ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಿದ್ದು, ನಾಲ್ಕು ವಿದ್ಯಾರ್ಥಿಗಳು ಜೆ.ಇ.ಇ ಪರೀಕ್ಷೆ ಉತ್ತಮ ಅಂಕ ಪಡೆದು, ಆಯ್ಕೆಯಾಗಿದ್ದಾರೆ. ಬಾಲಾಜಿ ವಿ, ಪ್ರತೀಕ್ಷಾ ಹೆಚ್, ಶಾರದಾ ಎಲ್, ಅನುಶ್ರೀ ಎನ್ ವಿದ್ಯಾರ್ಥಿಗಳು ಜೆ.ಇ.ಇ. ಅಡ್ವಾನ್ಸ್‌ಗೆ ಆಯ್ಕೆಯಾಗಿದ್ದು, ಈ ವಿದ್ಯಾರ್ಥಿಗಳಿಗೆ ಎಸ್. ನಿಜಲಿಂಗಪ್ಪ ಶಿಕ್ಷಣ ಸಂಸ್ಥೆಯ ಕಾರ್ಯಧರ್ಶಿ ಕೆ.ಎಸ್.ಕಲ್ಮಠ್.ಅಧ್ಯಕ್ಷರಾದ ಎಂ.ಶಿವಲಿಂಗಪ್ಪ ಸೇರಿದಂತೆ ಆಡಳಿತ ಮಂಡಳಿ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದನೆ ಸಲ್ಲಿಸಿದ್ದಾರೆ.

# ತ್ರಿಪದಿಗಳಿಂದ ಮಾನವ ಕುಲಕ್ಕೆ ಮಾರ್ಗದರ್ಶನ, ಸಂದೇಶ ನೀಡಿದ ಕವಿ ಸರ್ವಜ್ಞ: ಎಂ.ಕಾರ್ತೀಕ್


» **ಚಿತ್ರದುರ್ಗ**

ಸಾಮಾನ್ಯ ಜನರಿಗೆ ಅರ್ಥವಾಗುವ ರೀತಿಯಲ್ಲಿ ಅತ್ಯಂತ ಸುಲಭ ಹಾಗೂ ಸರಳ ಭಾಷೆಯಲ್ಲಿ ಕವಿ ಸರ್ವಜ್ಞರು ತ್ರಿಪದಿ ರಚನೆ ಮಾಡಿದ್ದಾರೆ. ಕವಿ ಸರ್ವಜ್ಞರು ತ್ರಿಪದಿಗಳ ಮೂಲಕ ಮಾನವ ಕುಲಕ್ಕೆ ಮಾರ್ಗದರ್ಶನ ಹಾಗೂ ಸಂದೇಶ ನೀಡಿದ್ದಾರೆ ಎಂದು ಉಪವಿಭಾಗಾಧಿಕಾರಿ ಎಂ.ಕಾರ್ತೀಕ್ ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ, ಕುಂಬಾರ ಗುಂಡಯ್ಯ ಮಹಾಸಂಸ್ಥಾನ, ಜಿಲ್ಲಾ ಕುಂಬಾರ ಕ್ಷೇಮಾಭಿವೃದ್ಧಿ ಸಂಘ, ಕರ್ನಾಟಕ ಕುಂಬಾರ ಮಹಿಳಾ ಮಹಾಸಭಾ ವತಿಯಿಂದ ಹಮ್ಮಿಕೊಂಡಿದ್ದ ಕವಿ ಸರ್ವಜ್ಞ ಜಯಂತಿ ಆಚರಣೆ ಸಮಾರಂಭದಲ್ಲಿ ಕವಿ ಸರ್ವಜ್ಞರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಸರ್ವಜ್ಞ ಎಂದರೆ ಎಲ್ಲವನ್ನೂ ಬಲ್ಲವನು ಎಂದರ್ಥ. ಎಲ್ಲವನ್ನೂ ತಿಳಿದಿರುವ ವ್ಯಕ್ತಿ ಸರ್ವಜ್ಞ, ತ್ರಿಪದಿಗಳಲ್ಲಿ ಶ್ರೇಷ್ಠ ಜೀವತತ್ವಗಳನ್ನು ಅದ್ಭುತವಾಗಿ ತಿಳಿಸಿದ್ದಾರೆ. ಒಂದು ಸಾವಿರಕ್ಕೂ ಹೆಚ್ಚು ತ್ರಿಪದಿಗಳನ್ನು ರಚನೆ ಮಾಡಿ, ಇಡೀ ಮಾನವ ಕುಲಕ್ಕೆ ಮಾರ್ಗದರ್ಶನ ಹಾಗೂ ಸಂದೇಶ ನೀಡಿದ್ದಾರೆ ಎಂದರು.

ಶಿಕ್ಷಕಿ ಗೀತಾ ಭರಮಸಾಗರ ಕವಿ ಸರ್ವಜ್ಞರ ಕುರಿತು ಉಪನ್ಯಾಸ ನೀಡಿ, ಕವಿ ಸರ್ವಜ್ಞರನ್ನು ಸರ್ವಕಾಲಿಕ ವ್ಯಕ್ತಿ ಎಂದು ಕರೆಯುತ್ತೇವೆ. ಆತನ ವಿದ್ಯೆ, ವಿನಯ, ಪರಿಪೂರ್ಣತೆಯು ಈ ಲೋಕದ ಡೊಂಕು ತಿದ್ದುವ ದಿಟ್ಟತನ ಹೊಂದಿದ, ಸರ್ವವನ್ನು ಬಲ್ಲವಂತಹ ತ್ರಿಪದಿಗಳ ಸೃಷ್ಟಿಕರ್ತ ಸರ್ವಜ್ಞ, ಕನ್ನಡದ ಸಾಹಿತ್ಯಕ್ಕೆ, ಕನ್ನಡ ಸಾಹಿತ್ಯ ಪರಂಪರೆ, ಸಾಂಸ್ಕೃತಿಕತೆಗೆ ಸರ್ವಜ್ಞರ ಕೊಡುಗೆ ಅಜರಾಮರ. ಸರ್ವಜ್ಞರು ತ್ಯಾಗಿಯಾಗಿ, ಯೋಗಿಯಾಗಿ, ಮಹಾಶಿವಯೋಗಿಯಾಗಿ ಲೋಕಕ್ಕೆ ಅಜರಾಮರವಾಗಿದ್ದಾರೆ ಎಂದು ಬಣ್ಣಿಸಿದರು.






ಸರ್ವಜ್ಞ ಎಂಬುವುದು ಹುಟ್ಟು ಹೆಸರಲ್ಲ. ಅಂದಿನ ರಾಜಾಶ್ರಯದಲ್ಲಿ ನೀಡಿದಂತಹ ಒಂದು ಬಿರುದಾಗಿದೆ. ಕೆಲವೊಂದು ಸಾಹಿತಿಗಳಿಗೆ, ಮೇರು ಕವಿಗಳಿಗೆ ನೀಡುವಂತಹ ಒಂದು ಹೆಸರಾಗಿದೆ. ಅವರ ನಿಜನಾಮ ಪುಷ್ಪದತ್ತ. ಸುಮಾರು ಎರಡು ಸಾವಿರ ತ್ರಿಪದಿಗಳು ಸಿಕ್ಕರೂ ಸರ್ವಜ್ಞನ ಹೆಸರಿನಲ್ಲಿರುವುದು ಒಂದು ಸಾವಿರ ತ್ರಿಪದಿಗಳು ಎಂದು ಮೂಲಗಳ ಪ್ರಕಾರ ತಿಳಿದುಬರುತ್ತದೆ ಎಂದರು.

ತ್ರಿಪದಿಗಳ ಮೂಲಕ ಕನ್ನಡ ಅಸ್ಮಿತೆಯನ್ನು ಅರ್ಥ ಮಾಡಿಸಿದ ಮೂಲ ಪುರುಷ ಕವಿ ಸರ್ವಜ್ಞರು. ತ್ರಿಪದಿಗಳ ಮೂಲಕ ಸಮಾಜವನ್ನು ತಿದ್ದುವಂತಹ, ಛಾಟಿಯನ್ನು ಬೀಸುವ ಕೆಲಸ ಮಾಡಿದವರು. ಸಮಾಜಜ ಒಳಿತಿಗಾಗಿ, ಸಮಾಜಕ್ಕೆ ಹಿಡಿದಿರುವ ರೋಗವನ್ನು ಚಿಕಿತ್ಸೆ ಮೂಲಕ ಗುಣಪಡಿಸಲು ಸರ್ವಜ್ಞರ ತ್ರಿಪದಿಗಳು ಅತ್ಯವಶ್ಯಕವಾಗಿವೆ ಎಂದು ಹೇಳಿದರು.

ಕವಿ ಸರ್ವಜ್ಞರು ಹೆಚ್ಚು ವಿದ್ಯೆ ಕಲಿತವರಲ್ಲ. ಚಿಕ್ಕವಯಸ್ಸಿನಲ್ಲಿಯೇ ಮನೆತೊರೆದು ಇಡೀ ಜಗತ್ತನ್ನೇ ಜ್ಞಾನದೇಗಲವನ್ನಾಗಿ ಮಾಡಿಕೊಂಡವರು ಎಂದು ತಿಳಿಸಿದರು.

ಡಾ.ಬಿ.ತಿಪ್ಪೇಸ್ವಾಮಿ ಮಾತನಾಡಿ, ಕವಿ ಸರ್ವಜ್ಞರು ತ್ರಿಪದಿಗಳ ಮೂಲಕ ನಾಗರಿಕ ಸಮಾಜಕ್ಕೆ ನೈತಿಕ, ಸಾಮಾಜಿಕ ಹಾಗೂ ಧಾರ್ಮಿಕ ವಿಚಾರಗಳ ಕುರಿತು ತಿಳಿಸಿದ್ದಾರೆ. ಜಾತಿ, ಮತ, ಪಂಥಗಳ ಬಗ್ಗೆ ಸಮಾಜದ ಅಂಕು-ಡೊಂಕು ತಿದ್ದಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಚಿತ್ರದುರ್ಗ ಕುಂಬಾರ ಗುರುಪೀಠದ ಬಸವಮೂರ್ತಿ ಕುಂಬಾರ ಗುಂಡಯ್ಯ ಸ್ವಾಮೀಜಿ, ಕುಂಬಾರ ಗುಂಡಯ್ಯ ಮಹಾಸಂಸ್ಥಾನದ ಅಧ್ಯಕ್ಷ ಕೆ.ಚಂದ್ರಪ್ಪ, ಕಾರ್ಯದರ್ಶಿ ಎ.ಎನ್. ಮಹಾಂತೇಶಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ. ಮಲ್ಲಿಕಾರ್ಜುನ, ಜಿಲ್ಲಾ ಕುಂಬಾರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಎಸ್. ಯರ್ರಿಸ್ವಾಮಿ, ಕಾರ್ಯದರ್ಶಿ ವೈ. ಮೃತ್ಯುಂಜಯ, ಕರ್ನಾಟಕ ಕುಂಬಾರ ಮಹಿಳಾ ಮಹಾಸಭಾದ ಅಧ್ಯಕ್ಷೆ ಎಸ್.ಬೈಲಮ್ಮ, ಕಾರ್ಯದರ್ಶಿ ಹೇಮಾವತಿ ಸೇರಿದಂತೆ ಮುಖಂಡರಾದ ಚಂದ್ರಶೇಖರ್ ಮಲ್ಲಿಕಾರ್ಜುನ್, ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ಕೆಪಿಎಂ ಗಣೇಶಯ್ಯ ಸೇರಿದಂತೆ ಮತ್ತಿತರರು ಇದ್ದರು. ಹೊಸದುರ್ಗದ ಸರಸ್ವತಿ ಮತ್ತು ತಂಡದವರು ಗೀತಗಾಯನ ನಡೆಸಿಕೊಟ್ಟರು.

ಜಾನಪದ ಕಲಾತಂಡಗಳೊಂದಿಗೆ ಮೆರವಣಿಗೆ: ಕವಿ ಸರ್ವಜ್ಞ ಜಯಂತಿ ಅಂಗವಾಗಿ ನಗರದ ಹೊಳಲ್ಕೆರೆ ರಸ್ತೆಯ ಗೌರಸಂದ್ರ ಮಾರಮ್ಮ ದೇವಸ್ಥಾನದಿಂದ ವಿವಿಧ ಜಾನಪದ ಕಲಾತಂಡಗಳೊಂದಿಗೆ ಆಯೋಜಿಸಲಾದ ಕವಿ ಸರ್ವಜ್ಞರ ಭಾವಚಿತ್ರ ಮೆರವಣಿಗೆಗೆ ಚಿತ್ರದುರ್ಗ ತಹಶೀಲ್ದಾರ್ ಡಾ.ನಾಗವೇಣಿ ಚಾಲನೆ ನೀಡಿದರು.

ನಗರದ ಹೊಳಲ್ಕೆರೆ ರಸ್ತೆಯ ಗೌರಸಂದ್ರ ಮಾರಮ್ಮ ದೇಗುಲದಿಂದ ಆರಂಭವಾದ ಭವ್ಯ ಮೆರವಣಿಗೆಯು ಗಾಂಧಿವೃತ್ತ, ಅಂಬೇಡ್ಕರ್ ವೃತ್ತದ ಮಾರ್ಗವಾಗಿ ನಗರದ ತರಾಸು ರಂಗಮಂದಿರದವರೆಗೂ ನಡೆಯಿತು.ಈ ಸಂದರ್ಭದಲ್ಲಿ ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ ಸೇರಿದಂತೆ ಕುಂಬಾರ ಸಮಾಜದ ಮುಖಂಡರು ಇದ್ದರು.

## ಚೌಡೇಶ್ವರಿ ದೇವಿ ರಥೋತ್ಸವಕ್ಕೆ ರಘುಮೂರ್ತಿ ಚಾಲನೆ

» **ನಾಯಕನಹಟ್ಟಿ**

ನಾಯಕನಹಟ್ಟಿ ಸಮೀಪ ಇರುವ ಕಾವಲು ಚೌಡೇಶ್ವರಿ ಜಾತ್ರೆ ಸಕಲ ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಪ್ರತಿ ವರ್ಷದಂತೆ ಈ ವರ್ಷವೂ ದೇವಿಯ ಜಾತ್ರೆ ಅದ್ದೂರಿಯಾಗಿ ಜರುಗಿತ್ತು, ಹಾಗೇ ದೇವಸ್ಥಾನದ ಸಮಿತಿಯೂ ಈ ವರ್ಷವೂ ಕೂಡ ಜಾತ್ರೆಯ ಸಮಯದಲ್ಲಿ ದೇವಿಯ ಪೂಜಾ ಕಾರ್ಯಕ್ರಮಗಳನ್ನು ದೇವಸ್ಥಾನದ ಪೂಜಾ ನಿರ್ವಹಣೆಯ ಸಮಿತಿಯವರು ಹಾಗೂ ಗ್ರಾಮಸ್ಥರು ದೇವಿಯ ಪೂಜೆ ಸಕಲ ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಹಮ್ಮಿಕೊಳ್ಳಲಾಯಿತ್ತು, ಇಲ್ಲಿನ ಭಕ್ತಾದಿಗಳು ಕಠಿಣ ಉಪವಾಸ ಮತ್ತು ಶ್ರದ್ಧೆಯಿಂದ ದೇವಿಯ ದರ್ಶನ ಪಡೆದರು, ಧಾರ್ಮಿಕ ಪರಂಪರೆ ಮತ್ತು ಶ್ರದ್ಧೆಗೆ ಹೆಸರುವಾಸಿ ಆದಂತ ನಾಯಕನಹಟ್ಟಿ ಮತ್ತು ಮುಸ್ಟೂರು ಮಧ್ಯೆ ಇರುವ ಕಾವಲು ಚೌಡೇಶ್ವರಿ ದೇವಿಯಾಗಿದೆ ಎಂದು ಪಟೇಲ್ ಜಿ.ಎಂ ತಿಪ್ಪೇಸ್ವಾಮಿ ಎತ್ತಿನಹಟ್ಟಿ ಗೌಡ್ರು ತಿಳಿಸಿದರು.

ದೇವಿಯ ಮುಕ್ತಿ ಭಾವುಟವನ್ನು ಗೌಡಗೆರೆ ಗ್ರಾಮ ಪಂಚಾಯಿತಿ ಸದಸ್ಯರಾದ ತಿಪ್ಪೇಸ್ವಾಮಿ 71 ಸಾವಿರಕ್ಕೆ ದೇವಿಯ ಮುಕ್ತಿ ಭಾವುಟ ಪಡೆದುಕೊಂಡರು.

ಚಳ್ಳಕೆರೆ ವಿಧಾನ ಸಭಾ ಕ್ಷೇತ್ರದ ಮಾನ್ಯ ಶಾಸಕರಾದ ರಘುಮೂರ್ತಿ ಹಾಗೂ ಅವರ ಕುಟುಂಬದವರು ಶ್ರೀ ಚೌಡೇಶ್ವರಿ ದೇವಿಯ ದರ್ಶನ ಪಡೆದು ರಥೋತ್ಸವಕ್ಕೆ ಚಾಲನೆ ನೀಡಿದರು.



ಕಾವಲು ಚೌಡೇಶ್ವರಿ ದೇವಿಯ ದರ್ಶನ ಪಡೆಯಲು ಸಾವಿರಾರು ಭಕ್ತಾಧಿಗಳು ಆಗನಮಿಸಿದ್ದರು. ಸ್ವಚ್ಛತೆ, ನೀರಿನ ಸೌಲಭ್ಯ, ವಾಹನಗಳ ಸೌಲಭ್ಯ, ದೇವಿಯ ದರ್ಶನ ಪಡೆಯಲು ಬಂದತಹ ಭಕ್ತಾಧಿಗಳಿಗೆ ಪ್ರಸಾದವಿತ್ತು.

ಈ ಸಂದರ್ಭದಲ್ಲಿ ಉಪಸ್ಥಿತರಾದ ದೇವಸ್ಥಾನದ ಸಮಿತಿಯ ಅಧ್ಯಕ್ಷರಾದ ಎಂ.ವೈ.ಟಿ ಸ್ವಾಮಿ, ಎತ್ತಿನಹಟ್ಟಿ ದೇವರಾಜ್, ನಿಕಟ ಪೂರ್ವ ತಹಸಿಲ್ದಾರ್ ರಘುಮೂರ್ತಿ, ಪಟ್ಟಣ ಪಂಚಾಯತಿ ಸದಸ್ಯರಾದ ರವಿಕುಮಾರ್, ಸುನೀತ ಮುದಿಯಪ್ಪ, ಜಾಗನೂರಹಟ್ಟಿ ಸಾಹಿತಿ ಮಂಜುನಾಥ, ಮಾಜಿ ತಾಲ್ಲೂಕು ಪಂಚಾಯಿತಿ ಸದಸ್ಯ ಜಾಗನೂರಹಟ್ಟಿ ಎಸ್ ಓಬಯ್ಯ, ಭೀಮಗೊಂಡನಹಳ್ಳಿ ಹನುಮಣ್ಣ, ನೆಲಗೇತನಹಟ್ಟಿ ಗ್ರಾಮ ಪಂಚಾಯತಿ ಸದಸ್ಯ ಮಲ್ಲಿಕಾರ್ಜುನ, ದೇವರಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯ ಕಾಟಯ್ಯ, ಬಸಪ್ಪ ನಾಯಕ, ಬೋರಸ್ವಾಮಿ, ತಿಪ್ಪೇಸ್ವಾಮಿ, ಚಂದ್ರಣ್ಣ, ಶ್ರೀಕಾಂತ, ವಕೀಲ ಮಲ್ಲೇಶ, ನಲ್ಲನ ದೊಡ್ಡ ಬೋರಯ್ಯ, ಬಿ. ಜಯಣ್ಣ, ಪ್ರಕಾಶ್, ರಾಮ್‌ದಾಸ್, ಗೊಂಚಿಗಾರ್ ಬೋರಯ್ಯ, ವಕೀಲ ಜಗದೀಶ, ಗುರು, ಮಂಜಣ್ಣ, ನಾಯಕನಹಟ್ಟಿ ಪೋಲೀಸ್ ಠಾಣೆ ಪಿಎಸೈ ದೇವರಾಜ್ ಹಾಗೂ ಸಿಬ್ಬಂದಿ ವರ್ಗದವರು, ಕೆಇಬಿ ಸಿಬ್ಬಂದಿ ವರ್ಗ, ಹಾಗೂ ದೇವಸ್ಥಾನದ ಸಮಿತಿಯವರು ಎಲ್ಲಾ ಸುತ್ತ ಮುತ್ತ ಬಂದಿರುವಂತಹ ಭಕ್ತಾದಿಗಳು ಇದ್ದರು.

## ರಾಜ್ಯ ಮಟ್ಟದ ಚಟುವಟಿಕೆಗಳ ಸ್ಪರ್ಧೆಯಲ್ಲಿ ಸರ್ಕಾರಿ ಶಾಲೆಯ ಶಿಕ್ಷಕ ಮಂಜುನಾಥ್‌ಗೆ ಪ್ರಥಮ ಸ್ಥಾನ

» **ಹೊಸದುರ್ಗ**



ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಬೆಂಗಳೂರು,ರಾಷ್ಟ್ರೀಯ ಶಿಕ್ಷಕರ ಕಲ್ಯಾಣ ಪ್ರತಿಷ್ಠಾನ, ಕರ್ನಾಟಕ ರಾಜ್ಯ ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ನಿಧಿ ಹಾಗೂ ಶಿಕ್ಷಕರ ಕಲ್ಯಾಣ ನಿಧಿ ಬೆಂಗಳೂರು, ಜಿಲ್ಲಾಡಳಿತ ಜಿಲ್ಲಾ ಪಂಚಾಯಿತಿ ಹಾಗೂ ಶಾಲಾ ಶಿಕ್ಷಣ ಇಲಾಖೆ ತುಮಕೂರು ಇವರ ಸಂಯುಕ್ತಾಶ್ರಯದಲ್ಲಿ ಈಚೆಗೆ ತುಮಕೂರಿನಲ್ಲಿ ನಡೆದ 2023-24 ನೇ ಸಾಲಿನ ರಾಜ್ಯ ಮಟ್ಟದ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ಸಹಪಠ್ಯ ಚಟುವಟಿಕೆಗಳ ಸ್ಪರ್ಧೆಯ ರಸಪ್ರಶ್ನೆ (ವಿಜ್ಞಾನ) ವಿಭಾಗದಲ್ಲಿ ವಿಜ್ಞಾನ ಶಿಕ್ಷಕ ಮಂಜನಾಥ ಟಿ.ಪಿ ಇವರು ಪ್ರಥಮ ಸ್ಥಾನವನ್ನ ಪಡೆದಿದ್ದಾರೆ. ಮಂಜುನಾಥ್ ಇವರು ಹೊಸದುರ್ಗ ತಾಲೂಕಿನ ದೇವಪುರ ಬೋವಿಹಟ್ಟಿ ಗ್ರಾಮದ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿಜ್ಞಾನ ಶಿಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

## ನಾಳೆ ಗ್ರಾಮೀಣ ಕ್ರೀಡಾಕೂಟ

» **ಹೊಸದುರ್ಗ**

ಜಿಲ್ಲಾ ಆಡಳಿತ ಜಿಲ್ಲಾ ಪಂಚಾಯತ್ ಚಿತ್ರದುರ್ಗ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಚಿತ್ರದುರ್ಗ ಇವರ ಸಂಯುಕ್ತ ಆಶ್ರಯದಲ್ಲಿ 2023-24 ನೇ ಸಾಲಿನ ಹೊಸದುರ್ಗ ತಾಲೂಕು ಮಟ್ಟದ ಗ್ರಾಮೀಣ ಕ್ರೀಡಾಕೂಟವನ್ನು ಪಟ್ಟಣದ ತಾಲೂಕು ಕ್ರಿಡಾಂಗಣದಲ್ಲಿ ಆಯೋಜಿಸಲಾಗಿದ್ದು ಯಾವುದೇ ವಯೋಮಿತಿ ಇರುವುದಿಲ್ಲ. ಫೆ 22 ರಂದು ಗುರುವಾರ ಬೆಳಗ್ಗೆ 10.30 ಕ್ಕೆ ಹಾಜರಿರಬೇಕು. ಬಾಲಕ ಬಾಲಕಿಯರಿಗೆ ಖೋ ಖೋ, ಕಬ್ಬಡಿ, ವಾಲಿಬಾಲ್ ಅಯೋಜಿಸಲಾಗಿದೆ.

**ಪ್ರಮುಖ ಸುದ್ದಿ**

# ಅರಳಿಹಳ್ಳಿ ಗ್ರಾಮದಲಿ ಇಂದು ಮತ್ತು ನಾಳೆ ಶ್ರೀ ಮೂಲ ಮಲಿಯಮ್ಮದೇವಿಯ ನೂತನ ದೇವಾಲಯ ಪ್ರಾರಂಭೋತ್ಸವ

» **ಹೊಸದುರ್ಗ**

ತಾಲೂಕಿನ ಕಸಬಾ ಹೋಬಳಿ ಅರಳಿಹಳ್ಳಿ ಗ್ರಾಮದ ಹೊರವಲಯದಲ್ಲಿ ಶ್ರೀ ಮೂಲ ಮಲಿಯಮ್ಮದೇವಿಯ ನೂತನ ದೇವಾಲಯ ಪ್ರಾರಂಭೋತ್ಸವವು ಫೆ.21 ರಂದು ಬುಧವಾರ ಮತ್ತು ಫೆ. 22 ರಂದು ಗುರುವಾರಎರಡು ದಿನಗಳ ಕಾಲ ನಡೆಯಲಿದೆ ಎಂದು ಮೂಲ ಮಲಿಯಮ್ಮದೇವಿ ಸೇವಾ ಸಮಿತಿ ಕಾರ್ಯದರ್ಶಿ ಸಫಾರಿ ಶಿವಲಿಂಗಪ್ಪ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದರು.

ಅರಳಿಹಳ್ಳಿ ಗ್ರಾಮದ ಹೊರವಲಯದಲ್ಲಿ 300 ವರ್ಷಗಳ ಹಿಂದೆ ಭೀರನಹಳ್ಳಿ ಎಂಬ ಗ್ರಾಮವಿತ್ತು. ಮೂಲ ಮಲಿಯಮ್ಮದೇವಿ ಅಲ್ಲಿಯೇ ನೆಲೆಗೊಂಡಿದ್ದಳು. ಕಾರಣಾಂತರಗಳಿಂದ ಮೂಲ ಮಲಿಯಮ್ಮದೇವಿಯನ್ನು



ಅರಳಿಹಳ್ಳಿ ಗ್ರಾಮಕ್ಕೆತಂದು ಪೂಜಿಸಲಾಯಿತು.ಈಗ 80 ಮನೆಯ ಒಕ್ಕಲಿನವರು ಸೇರಿಕೊಂಡು 1 ಕೋಟಿರೂ ವೆಚ್ಚದಲ್ಲಿ ಈ ಹಿಂದೆಇದ್ದ ಮೂಲ ಸ್ಥಾನದಲ್ಲಿಯೇ ಮಲಿಯಮ್ಮದೇವಿಯದೇವಾಲಯ ಸ್ಥಾಪಿಸಿದ್ದೇವೆ ಎಂದರು.

ಫೆ.20 ರಂದು ಮಂಗಳವಾರ ಧ್ವಜಾರೋಹಣ ನೆರವೇರಲಿದೆ. ಫೆ.21 ರ ಬುಧವಾರದಂದು ಶ್ರೀ ಮೂಲ ಮಲಿಯಮ್ಮದೇವಿಯದೇವಾಲಯ ಪ್ರವೇಶ, ಗಂಗಪೂಜೆ, ಗೋಪೂಜೆ, ಪೂರ್ಣಕುಂಭದೊಂದಿಗೆಗಣಪತಿ ಪೂಜೆ, ನವಗ್ರಹ ಕಳಸ ಸ್ಥಾಪನೆಯೊಂದಿಗೆ ಮಹಾರುದ್ರಾಭಿಷೇಕ, ಲಕ್ಷ್ಮೀನಾರಾಯಣದೊಂದಿಗೆ ಪೂಜಾಕಾರ್ಯಕ್ರಮ ನೆರವೇರಿಸಲಾಗುತ್ತದೆ.

ಫೆ. 22 ರಂದು ಗುರುವಾರದಂದು ಬ್ರಾಹ್ಮೀ ಮೂಹೂರ್ತದಲ್ಲಿ ಗಂಗಾಪೂಜೆಯೊಂದಿಗೆ ಶ್ರೀ ಮೂಲ ಮಲಿಯಮ್ಮದೇವಿಗೆ ಮಹಾರುದ್ರಭಿಷೇಕ ನಂತರ ಪುಷ್ಪಗಿರಿ ಶ್ರೀ ಸೋಮೇಶ್ವರ ಶಿಚಾಚಾರ್ಯ ಸ್ವಾಮೀಜಿಅವರಿಂದ ಶ್ರೀ ಮೂಲ ಮಲಿಯಮ್ಮದೇವಿ ಕಳಸಾರೋಹಣ ನೆರವೇರಲಿದೆ. ನಂತರ 11 ಗಂಟೆಗೆ ಧಾರ್ಮಿಕ ಸಭೆಆಯೋಜಿಸಲಾಗಿದೆ.

ಪುಷ್ಪಗಿರಿ ಮಠದ ಶ್ರೀ ಸೋಮೇಶ್ವರ ಶಿವಾಚಾರ್ಯ ಸ್ವಾಮೀಜಿ, ನಂದೀಪುರ ಹಿರೇಮಠದ ಶ್ರೀ ನಂದೀಶ್ವರ ಶಿವಾಚಾರ್ಯ ಸ್ವಾಮೀಜಿ, ಕುಂಚಿಟಿಗ ಮಠದ ಶ್ರೀ ಶಾಂತವೀರ ಸ್ವಾಮೀಜಿ, ಭಗೀರಥಗುರುಪೀಠದ ಶ್ರೀ ಪುರುಷೋತ್ತಮಾನಂದಪುರಿ ಸ್ವಾಮೀಜಿ, ಕನಕಗುರುಪೀಠದ ಶ್ರೀ ಈಶ್ವರಾನಂದಪುರಿ ಸ್ವಾಮೀಜಿ ಭಾಗವಹಿಸವರು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮೂಲ ಮಲಿಯಮ್ಮದೇವಿ ಸೇವಾ ಸಮಿತಿ ಅಧ್ಯಕ್ಷ ಜಿ.ಎಂ.ಪರಮೇಶ್ವರಪ್ಪ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T